
ಯುವ ಸ್ಫೂರ್ತಿ



ನಿಮ್ಮ ಮನಸ್ಸು ಮತ್ತು ಬುದ್ಧಿಯ ಹೊಡೆದಾಟದಲ್ಲಿ ಮೊದಲು ಮನಸ್ಸಿನ ಮಾತನ್ನು ಅನುಸರಿಸಿ.
–ಸ್ವಾಮಿ ವಿವೇಕಾನಂದ

MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER — VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ : 193 | ಶುಕ್ರವಾರ : 16–05–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2–00

VOLUME: 04 | ISSUE: 193 | FRIDAY: 16–05–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00


## ರಾಜ್ಯದಲ್ಲಿ ಪೂರ್ವ ಮುಂಗಾರು ಚುರುಕು



**ಬೆಂಗಳೂರು,ಮೇ.16–** ರಾಜ್ಯದಲ್ಲಿ ವಿವಿಧೆಡೆ ಪೂರ್ವ ಮುಂಗಾರು ಚುರುಕಾಗಿದ್ದು, ತಡರಾತ್ರಿ ಸುರಿದ ಮಳೆಗೆ ಭಾರೀ ಅನಾಹುತ ಸೃಷ್ಟಿಸಿದೆ.ರಾಮನಗರ ಜಿಲ್ಲೆಯ ವಿವಿಧೆಡೆ ಉತ್ತಮ ಮಳೆಯಾಗಿದ್ದು, ಮಾಗಡಿ ಪಟ್ಟಣದ ನಟರಾಜ ಬಡಾವಣೆಯಲ್ಲಿ ಮನೆಗಳಿಗೆ ನೀರು ನುಗ್ಗಿದ್ದು ರಾತ್ರಿಯಿಡೀ ಸಾರ್ವಜನಿಕರು ಜಾಗರಣೆ ಮಾಡುವಂತಾಯಿತು.ಮನೆಯಲ್ಲಿ ಸಂಗ್ರಹವಾಗಿದ್ದ ನೀರನ್ನು ಹೊರಗೆ ಹಾಕುವಲ್ಲಿ ನಿವಾಸಿಗಳು ಪರದಾಡುವಂತಾಯಿತು.

ಧರೆಗುರುಳಿದ ಕಮಾನು : ಬಿರುಗಾಳಿ ಮಳೆಗೆ ಬಿಡದಿ ಬಳಿ ಜಾಹೀರಾತು ಕಮಾನೊಂದು ಉರುಳಿಬಿದ್ದಿದ್ದು, ಅದೃಷ್ಟವಶಾತ್ ಯಾವುದೇ ಅನಾಹುತ ಸಂಭವಿಸಿಲ್ಲ. ಬೆಂಗಳೂರು–ಮೈಸೂರು ಹಳೆ ರಸ್ತೆಯ ಅವ್ವೇರಹಳ್ಳಿಯಲ್ಲಿ ಇತ್ತಿಚೆಗೆ ಅಳವಡಿಸಲಾಗಿದ್ದ ಕಮಾನು ರಾತ್ರಿ ಸುರಿದ ಗಾಳಿಮಳೆಗೆ ರಸ್ತೆಗೆ ಅಡ್ಡಲಾಗಿ ಉರುಳಿಬಿದ್ದಿದೆ.

ಈ ಸಂದರ್ಭದಲ್ಲಿ ವಾಹನಗಳ ಸಂಚಾರ ಕಡಿಮೆ ಇದ್ದುದ್ದರಿ ಂದ ಯಾವುದೇ ಅನಾಹುತ ಸಂಭವಿಸಿಲ್ಲ.ಉತ್ತರ ಕರ್ನಾಟಕ ಭಾಗದಲ್ಲೂ ಸಹ ಮಳೆ ಆರ್ಭಟ ಜೋರಾಗಿದ್ದು, ಬಾಗ ಲಕೋಟೆ ಜಿಲ್ಲೆಯ ಕಟಗೇರಿ ಗ್ರಾಮದಲ್ಲಿ ಸಿಡಿಲು ಬಡಿದು ಮಹಿಳೆಯೊಬ್ಬರು ಮೃತಪ ಟ್ಟಿದ್ದಾರೆ.ಗದಗ ಜಿಲ್ಲೆಯ ಲಕ್ಷ್ಮೇಶ್ವರ, ಕಲಬುರಗಿ ನಗರ ಹಾಗೂ ಬೀದರ್ ಜಿಲ್ಲೆಯ ವಿವಿಧೆಡೆ ಬಿರುಸಿನ ಮಳೆಯಾ ಗಿದೆ. ಹುಬ್ಬಳ್ಳಿಯಿಂದ ಬ್ಯಾಹಟ್ಟಿ ಗೆ ಸಂಪರ್ಕ ಕಲ್ಪಿಸುವ ರಸ್ತೆ ಮಧ್ಯದಲ್ಲಿ ಹಳ್ಳ ತುಂಬಿಹರಿ ದಿದ್ದು, ಗ್ರಾಮಸ್ಥರು ಹಳ್ಳ ದಾಟಲು ಪರದಾಡುವಂ

2ನೇ ಪುಟಕ್ಕೆ

## ಹೈನುಗಾರಿಕೆಯಿಂದ ಆರ್ಥಿಕವಾಗಿ ಸಬಲೀಕರಣರಾಗಿ : ನಾಡಗೌಡ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಮೇ.16–** ತಾಯಿಯ ಎದೆ ಹಾಲಿಗಿಂತಲೂ ಹಸುವಿನ ಹಾಲು ಕುಡಿದು ಬದುಕಿದವರೇ ಅಧಿಕ. ಹೈನುಗಾರಿಕೆಗೆ ಈ ಭಾಗದಲ್ಲಿ ಮಹಿಳೆಯರು ಹಾಗೂ ಪುರುಷರು ಪ್ರೋತ್ಸಾಹ ನೀಡುವ ಮೂಲಕ ತಮ್ಮ ಆರ್ಥಿಕ ವಹಿವಾಟನ್ನು ಹೆಚ್ಚಿಸಿಕೊಂಡು ಸಬಲೀಕರಣರಾಗಬೇಕೆಂದು ಗ್ರಾಮದ ಹಿರಿಯ ಮುಖಂಡರು ಅಮರೇಶ ನಾಡಗೌಡ ಹೇಳಿದರು.

ಪಟ್ಟಣದ ಸಮಿಪದ ಕಾಳಾಪೂರು ಗ್ರಾಮದಲ್ಲಿ ಮಹಿಳಾ ಹಾಲು ಉತ್ಪಾದಕರ ಸಹಕಾರಿ ಸಂಘದ ಕಾರ್ಯಲಯವನ್ನು ಉದ್ಘಾಟಿಸಿ ಮಾತನಾಡಿದ ಅವರು, ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಗುಣಮಟ್ಟದ ಹಾಲು ನೀಡುವ ಮೂಲಕ ಗ್ರಾಮದ ಎಲ್ಲಾ ರೈತ ಬಾಂಧವರು ಇದರ ಪ್ರಯೋಜನವನ್ನು ಪಡೆದ ುಕೊಳ್ಳಬೇಕೆಂದು ತಿಳಿಸಿದರು.

2ನೇ ಪುಟಕ್ಕೆ

## ತಾ.ಕೃಷಿ ಸಹಾಯಕ ನಿರ್ದೇಶಕರಿಂದ ಕೃಷಿ ಪರಿಕಾರಗಳ ಮಾರಾಟ ಅಂಗಡಿಗಳ ಪರಿಶೀಲನೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.16–** ಪಟ್ಟಣದ ವಿವಿಧ ಕೃಷಿ ಪರಿಕಾರಗಳ ಮಾರಾಟ ಅಂಗಡಿಗಳಿಗೆ ತಾ.ಕೃಷಿ ಸಹಾಯಕ ನಿರ್ದೇಶಕರಾದ ಗುರುನಾಥ ಭೂಸನೂರ ಭೇಟಿ ನೀಡಿ ಪರಿಶೀಲಿಸಿ ಮುಂಗಾರು ಪ್ರಾರಂಭವಾಗುತ್ತಿರುವುದರಿಂದ ರೈತರಿಗೆ ಅಗತ್ಯವಿರುವ ಬೀಜ,ಗೊಬ್ಬರ, ಕೀಟನಾಶಕ, ಸೇರಿದಂತೆ ಅಗತ್ಯ ಗುಣಮಟ್ಟದ ಕೃಷಿ ಪರಿಕರಗಳ ಅಗತ್ಯ ದಾಸ್ತನ್ನು ಮಾಡಕೊಳ್ಳಿ. ಆನಧಿಕೃತ ತಾಯಾರಿಕ ಸಂಸ್ಥೆಗಳ ಕಳಪೆ ಗುಣಮಟ್ಟದ ಕೃಷಿ ಪರಿಕಾರಗಳನ್ನು ಕಂಡು ಬಂದಲ್ಲಿ ಅಗತ್ಯ ಕಾನೂನು ಕ್ರಮ ಕೈಗೊಳ್ಳಲಾಗುವುದು ಮಾರಾಟ ಕೇಂದ್ರಗಳಲ್ಲಿ ರೈತರಿಗೆ ಕಾಣುವಂತೆ ತಮ್ಮಲಿರುವ ಬೀಜ, ಗೊಬ್ಬರ .ಕ್ರೀಮಿನಾಶಕಗಳ ದಾಸ್ತನಿನ ವಿವರ,ಗರಿಷ್ಟ ಮಾರಾಟ ಬೆಲೆ ಸೇರಿದಂತೆ ಅಗತ್ಯ ಮಾಹಿತಿಗಳನ್ನು ಪ್ರದರ್ಶಿಸಬೇಕು. ನಿಗದಿತ ಬೆಲೆಗಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡಿದಲ್ಲಿ ಕ್ರಮ ಕೈಗೊಳ್ಳಲಾಗುವುದು ಹಾಗೂ ರೈತರು ಖರೀದಿಸಿದ ಬೀಜ ಸೇರಿದಂತೆ ಕೃಷಿ ಪರಿಕಾರಗಳಿಗೆ ಕಡ್ಡಾಯವಾಗಿ ರಸೀದಿ ನೀಡಬೇಕು ಎಂದು ತಿಳಿಸಿದರು.

## ಬೇಸಿಗೆ ಶಿಬಿರದ ಸಮಾರೋಪ ಸಮಾರಂಭ ಕಾರ್ಯಕ್ರಮ



ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.16–** ಪಟ್ಟಣದ ಪ್ರಗತಿ ಪಿ.ಯು.ಕಾಲೇಜಿನ ಸಭಾಂಗಣದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾ,ಘಟಕ ಹಾಗೂ ತಾ.ವೀರಶೈವ ಲಿಂಗಾಯತ ಸಮಾಜದ ಸಂಯುಕ್ತಾಶ್ರಯದಲ್ಲಿ ನಡೆದ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭ ಕಾರ್ಯಕ್ರಮವನ್ನು ತಾ.ವೀರಶೈವ ಲಿಂಗಾಯತ ಸಮಾಜದ ಗೌರವಾಧ್ಯಕ್ಷರಾದ ಶ್ರೀಧರ ಸ್ವಾಮಿ ಉದ್ಘಾಟಿಸಿ ಮಾತನಾಡಿ ತಾಲೂಕಿನ ವೀರಶೈವ ಲಿಂಗಾಯತ ಸೇರಿದಂತೆ ವಿವಿಧ ಸಮುದಾಯಗಳ 10 ನೇ ತರಗತಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ 40 ದಿನಗಳ ಕಾಲ ಬೇಸಿಗೆ ಶಿಬಿರದ ಮೂಲಕ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ನೀಡಲಾಗಿದ್ದು ಈ ಶಿಬಿರದ ಪ್ರಯೋಜನವನ್ನು 70 ಹೆಚ್ಚು ವಿದ್ಯಾರ್ಥಿಗಳು ಪಡೆದುಕೊ ಂಡಿದ್ದಾರೆ ಮುಂದಿನ ದಿನಗಳ ಲ್ಲಿ ಪಿ.ಯು.ಸಿ. ವಿದ್ಯಾರ್ಥಿಗಳಿಗೆ ಸಿ.ಇ.ಟಿ, ಜೆ.ಇ.ಇ, ಪರೀಕ್ಷೆಗೆ ತರಬೇತಿ,ಐ.ಎ.ಎಸ್, ಕೆ.ಎ.ಸ್, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ಸೇರಿದಂತೆ ವಿದ್ಯಾಥಿ ರ್ಗಳಿಗೆ ಅಗತ್ಯವಿರುವ ಗುಣ ಮಟ್ಟದ ಶಿಕ್ಷಣ ಹಾಗೂ ತರ ಬೇತಿಯನ್ನು ನೀಡಲಾಗು ವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರಗತಿ ಪಿ.ಯು.ಕಾಲೇಜಿನ ಮುಖ್ಯಸ್ಥಾ ರಾದ ತಿಪ್ಪಣ್ಣ

2ನೇ ಪುಟಕ್ಕೆ

## ಪೋಷಕತ್ವ ಯೋಜನೆಯ ಅರಿವು ಮತ್ತು ಜಾಗೃತಿ ಕಾರ್ಯಕ್ರಮ

ಯುವ ಮಾರ್ಗ ಸುದ್ದಿ

**ದೇವದುರ್ಗ,ಮೇ.16–**ಚೈಲ್ಡ್ ಫಂಡ್ ಸಂಸ್ಥೆಯಿಂದ ಸುಂಕೇಶ್ವರಹಾಳ ಗ್ರಾಮದಲ್ಲಿ ಸ್ವಸಾಯ ಸಂಘದ ಸದಸ್ಯರಿಗೆ ತರಬೇತಿ ಯನ್ನು ಆಯೋಜನೆ ಮಾಡ ಲಾಗಿತ್ತು, ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ರಾಯಚೂರು ಸಾಮಾಜಿ ಕ ಕಾರ್ಯಕರ್ತರು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ತಿಕ್ಕಯ್ಯ, ಅವರು ಬಾಲ್ಯವಿವಾಹ ಬಾಲ ಕಾರ್ಮಿಕತೆ ಮಕ್ಕಳ ಹಕ್ಕುಗಳ ಬಗ್ಗೆ ತಿಳಿಸಿದರು. ಎಮ್.ಎನ್.ಡಿ ಚೈಲ್ಡ್ ಫಂಡ್ ಸಂಸ್ಥೆಯ ಬಾಳಪ್ಪ ಮಾತನಾಡಿ, ಶಿಕ್ಷಣ ಮತ್ತು ಮೌಲ್ಯಗಳು ಮಕ್ಕಳ ಕಲಿಕೆ ಮತ್ತು ಉತ್ತಮ ನಾಗರಿಕ ರಾಗಲು ಬಹಳ ಮುಖ್ಯ ಎಂ



ದು ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಪೋಷಕತ್ವ ಯೋಜನೆಯ ಸಂಯೋಜಕರಾದ ನಾಗರಾಜ್ ಮಾನಸಗಲ್ ಅವರು ಪೋಷಕತ್ವ ಎಂದರೆ ಕಾನೂನಿನ ಪ್ರಕಾರ ಪಾಲನೆ ಪೋಷಣೆ ರಕ್ಷಣೆಯಿಂದ ವಂಚಿತರಾದ ಮಕ್ಕಳು ಹಾಗೂ ಪರಿವಾರದ ಹಾರೈಕೆಯಿಂದ ವಂಚಿತರಾದ ಮಕ್ಕಳಿಗೆ ತಾತ್ಕಾಲಿಕ ಪರಿವಾರದ ಮೂಲಕ ಸಿಗುವ ಕಾಳಜಿಯನ್ನು ಪೋಷಕತ್ವ ಎಂದು ತಿಳಿಸಿದರು. ಬಾಲ ನ್ಯಾಯ ಕಾಯ್ದೆ 2015 ಕಲಂ 44ರ ಪ್ರಕಾರ ಪೋಷಕತ್ವ ಯೋಜನೆ ಅಡಿಯಲ್ಲಿ ಮಗುವಿನ ಪಾಲನೆ ಪೋಷಣೆ ರಕ್ಷಣೆಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ

2ನೇ ಪುಟಕ್ಕೆ

## ದೈಹಿಕವಾಗಿ ಸದೃಡರಾಗಿರಲು ಕ್ರೀಡೆ ಅವಶ್ಯಕ : ಶ್ರೀನಿವಾಸ್ ಪೂಜಾರಿ



ಯುವ ಮಾರ್ಗ ಸುದ್ದಿ

**ದೇವದುರ್ಗ,ಮೇ.16–**ಶ್ರೀ ಲಕ್ಷ್ಮೀ ರಂಗನಾಥ ಸ್ವಾಮಿಯ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಮಾನಸಗಲ್ ಪ್ರೀಮಿಯರ್ ಲೀಗ್ ಯಶಸ್ವಿಯಾಗಿ ಮುಕ್ತಾಯಗೊಂಡಿತು.

ಫೈನಲ್ ಪಂದ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಶ್ರೀನಿವಾಸ್ ಪೂಜಾರಿ ಕ್ರೀಡೆಯಲ್ಲಿ ಆಸಕ್ತಿ ಮತ್ತು ಶ್ರದ್ಧೆ ಪರಿಶ್ರಮ ರೂಢಿಸಿಕೊಂಡಾಗ ಮಾತ್ರ ದೈಹಿಕವಾಗಿ ಸದೃಢರಾಗಲು ಸಾಧ್ಯ ಹೇಳಿದರು. ಪ್ರತಿ ವರ್ಷದಂತೆ ಈ ವರ್ಷವೂ ಸಹ ಕ್ರಿಕೆಟನ್ನು ಆಯೋಜನೆ ಮಾಡಲಾಗಿತ್ತು. ಕ್ರೀಡಾಪಟುಗಳಿಗೆ ಬ್ಯಾಟ್, ಬಾಲ್, ಕಪ್ ,ಸ್ಟಂಪ್ ಒಳಗೊಂಡ ಕ್ರಿಕೆಟ್ ಕಿಟ್‌ನ್ನು ರಂಗನಾಥ ಪೂಜಾರಿ ವಿತರಣೆ ಮಾಡಿದರು. ಮೊದಲ ಸ್ಥಾನ ತಿಮ್ಮಣ್ಣ ಬುದೂರು ಪಡೆದ ತಂಡಕ್ಕೆ ರಂಗಪ್ಪ ನಗರಗುಂಡ ಅವರು 5001 ನಗದು ಹಾಗೂ ಕಪ್ ವಿತರಣೆ ಮಾಡಿದರು.

ದ್ವಿತೀಯ ಸ್ಥಾನ ಪಡೆದ ರಾಮಣ್ಣ ಕುರುಕಳ್ಳಿ ತಂಡಕ್ಕೆ 2001 ರೂಪಾಯಿ ನಗದು ಬಹುಮಾನವನ್ನು ವೆಂಕಟೇಶ್ ವಕೀಲರು ನೀಡಿದರು.ಈ ಸಂದರ್ಭದಲ್ಲಿ ವೆಂಕಟೇಶ ಪೊಲೀಸ್ ಪಾಟೀಲ್, ವೆಂಕಟೇಶ್ ಸಲಿಕ್ಯಪೂರ್ ಆಂಜನೇಯ, ರಂಗಣ್ಣ ,ನಾಗೇಶ್, ತಿಮ್ಮಣ್ಣ ಅಯ್ಯಣ್ಣ ನಗರಗುಂಡ ಇತರರು ಇದ್ದರು.

## ವಿಶೇಷ ತರಗತಿಗಳ ಸೌಲಭ್ಯ ಪಡೆಯಿರಿ: ಕೆ.ಬಿ.ಬಡಿಗೇರ



ಯುವ ಮಾರ್ಗ ಸುದ್ದಿ

**ರಾಯಚೂರು,ಮೇ.16–** ಶಾಲಾ ಶಿಕ್ಷಣ ಇಲಾಖೆಯಿಂದ 2025ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ–2ರಲ್ಲಿ ನೋಂದಾಯಿಸಲಾದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ಜೂನ್ 02ರವರೆಗೆ ಹಮ್ಮಿಕೊಳ್ಳಲಾಗಿದ್ದು, ವಿದ್ಯಾರ್ಥಿಗಳು ವಿಶೇಷ ತರಗತಿಗಳ ಸೌಲಭ್ಯ ಪಡೆಯಬೇಕೆಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಬಿ.ಬಡಿಗೇರ ಅವರು ತಿಳಿಸಿದ್ದಾರೆ.

ಮೇ.14ರ ಬುಧವಾರ ದಂದು ನಗರದ ಯರಮರಸ್ ಸಕಾರಿ ಪ್ರೌಢ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶೇಷ ತರಗತಿಗಳನ್ನು ಪರಿಶೀಲಿಸಿ ಮಾತನಾಡಿದರು.

ಎಸ್.ಎಸ್.ಎಲ್.ಸಿ ಪರೀಕ್ಷೆ–02ಕ್ಕೆ ನೋಂದಾಯಿಸಲಾದ ವಿದ್ಯಾರ್ಥಿಗಳಿಗೆ ಮೇ.26ರಿಂದ ಜೂನ್ 02ರವರೆಗೆ ಪರೀಕ್ಷೆಯು 49 ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಗುತ್ತಿದೆ. ಪರೀಕ್ಷೆ ನೋಂದಾಯಿಸಲಾದ ವಿದ್ಯಾರ್ಥಿಗಳಿಗೆ ಪ್ರತಿದಿನ ವಿಶೇಷ ತರಗತಿಗಳನ್ನು ಭಾನುವಾರ ಹೊರತುಪಡಿಸಿ ಪ್ರತಿದಿನವೂ ಬೆಳಿಗ್ಗೆ 08 ರಿಂದ ಮಧ್ಯಾಹ್ನ 12ಗಂಟೆಯವರೆಗೆ ಆಯಾ ಪ್ರೌಢಶಾಲೆಗಳ ನಡೆಸಲಾಗುತ್ತದೆ ಎಂದರು.

ಈ ವೇಳೆ ವಿಭಾಗದ ಮಟ್ಟದ ಕ್ಷೇತ್ರಾ ಶಿಕ್ಷಣಾಧಿಕಾರಿ ಚಂದ್ರಶೇಖರ ಭಂಡಾರಿ ಸೇರಿದಂತೆ ಶಾಲೆಯ ಮುಖ್ಯಗುರುಗಳು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

## ಆಲಮಟ್ಟಿ–ಹುಣಸಗಿ–ಯಾದಗಿರಿ ರೈಲು ಮಾರ್ಗ ಸಮೀಕ್ಷೆಗೆ ಹಸಿರು ನಿಶಾನೆ!

ಯುವ ಮಾರ್ಗ ಸುದ್ದಿ

**ಯಾದಗಿರಿ, ಮೇ.16–** ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಜಿ.ಕುಮಾರ ನಾಯಕ ಅವರ ಪ್ರಯತ್ನಕ್ಕೆ ಯಶಸ್ಸು ದೊರೆತಿದೆ. ಬಹುಕಾಲದ ಬೇಡಿಕೆಯಾಗಿದ್ದ ಆಲಮಟ್ಟಿ–ಹುಣಸಗಿ–ಯಾದಗಿರಿ ನಡುವಿನ 162 ಕಿಮೀ ಉದ್ದದ ನೂತನ ರೈಲು ಮಾರ್ಗದ ಅಂತಿಮ ಸಮೀಕ್ಷೆ ಕಾರ್ಯಕ್ಕೆ ಕೇಂದ್ರ ರೈಲ್ವೆ ಇಲಾಖೆ ಹಸಿರು ನಿಶಾನೆ ತೋರಿದೆ. ಈ ಸಮೀಕ್ಷೆಗಾಗಿ ?4.05 ಕೋಟಿ ವೆಚ್ಚವನ್ನು ಮಂಜೂರು ಮಾಡಲಾಗಿದೆ ಎಂದು ಸಂಸದರು ತಿಳಿಸಿದ್ದಾರೆ.

ಡಿಸೆಂಬರ್‌ನಲ್ಲಿ ಕೇಂದ್ರ ರೈಲ್ವೆ ಸಚಿವರನ್ನು ಭೇಟಿಯಾಗಿ ಈ ಮಹತ್ವದ ಯೋಜನೆಗೆ ಅನುಮೋದನೆ ನೀಡುವಂತೆ



ಒತ್ತಾಯಿಸಿದ್ದ ಸಂಸದ ಜಿ ಕುಮಾರ ನಾಯಕ ಅವರು, ನಂತರ ಏಪ್ರಿಲ್‌ನಲ್ಲಿ ಸಚಿವರ ಕಾರ್ಯನಿರ್ವಾಹಕ ನಿರ್ದೇಶಕರಾದ ವಿಕಾಸ್ ಜೈನ್ ಅವರನ್ನು ಭೇಟಿ ಮಾಡಿ ತ್ವರಿತ ಅನುಮೋದನೆಗೆ ಮನವಿ ಮಾಡಿದ್ದರು. ಅವರ ನಿರಂತರ ಪ್ರಯತ್ನದ ಫಲವಾಗಿ ಇಂದು ಸಮೀಕ್ಷೆಗೆ ಅನುಮೋದನೆ ದೊರೆತಿದೆ.

ಈ ಕುರಿತು ಮಾತನಾಡಿದ ಸಂಸದರು, "ಆಲಮಟ್ಟಿ–ಹುಣಸಗಿ–ಯಾದಗಿರಿ ಭಾಗದ ಜನರ ಬಹುಕಾಲದ ಬೇಡಿಕೆಯಿದು. ಈ ರೈಲು ಮಾರ್ಗವು ಈ ಪ್ರದೇಶದ ಸಂಪರ್ಕವನ್ನು ಸುಧಾರಿಸುವುದಲ್ಲದೆ, ಆರ್ಥಿಕ

2ನೇ ಪುಟಕ್ಕೆ

## ಮೊದಲನೇಯ ಪುಟದಿಂದ

# ರಾಜ್ಯದಲ್ಲಿ ಪೂರ್ವ ಮುಂಗಾರು ಚುರುಕು

ತಾಯಿತು. ಕೋಲಾರದಲ್ಲೂ ಸಹ ಮಳೆಯಾಗಿದ್ದು, ಬಾಗೇಪಲ್ಲಿ ಪಟ್ಟಣ ದಲ್ಲಿ ನಿನ್ನೆ ಸಂಜೆ ಸುರಿದ ಗುಡುಗು ಮಿಂಚು ಮಳೆಯಿಂ ದ ಹೊಲಗದ್ದೆಗಳಲ್ಲಿ ನೀರು ಸಂಗ್ರಹವಾಗಿ ತರಕಾರಿ ಬೆಳೆಗಳು ನಾಶವಾಗಿವೆ.

ಮೈಸೂರು, ಹಾಸನ, ಕೊಡಗು, ತುಮಕೂರು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ ಸೇರಿದಂತೆ ವಿವಿಧೆಡೆ ಭಾರಿ ಮಳೆಯಾಗಿದೆ. ನೈಋತ್ಯ ಬಂಗಾಳಕೊಲ್ಲಿಯ ಮೇಲೆ ಟ್ರಫ್ ಇರುವುದರಿಂದ ಒಂದು ವಾರಗಳ ಕಾಲ ರಾಜ್ಯಾದ್ಯಂತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

# ಹೈನುಗಾರಿಕೆಯಿಂದ ಆರ್ಥಿಕವಾಗಿ ಸಬಲೀಕರಣರಾಗಿ : ನಾಡಗೌಡ

ವಿಸ್ತೀರಣಾಧಿಕಾರಿ ಮತ್ತು ಮುದಗಲ್ ಬಿಎಂಸಿ ವ್ಯವಸ್ಥಾಪಕ ಮಂಜುನಾಥ ಕರಡಕಲ್ ಅವರು ಮಾತನಾಡಿ, ಸುಸ್ಥಿರ ಜೀವನೋಪಾಯ ಕೈಗೊಳ್ಳುವ ಉದ್ದೇಶದಿಂದ ಗ್ರಾಮದಲ್ಲಿ ಮಹಿಳಾ ಹಾಲು ಉತ್ಪಾದಕರ ಸಹಕಾರಿ ಸಂಘವನ್ನು ರಚಿಸಿಕೊಂಡು, ಗ್ರಾಮಿಣ ಪ್ರದೇಶದಲ್ಲಿ ಹೈನುಗಾರಿಕೆಯು ದೈನಂದಿನ ವ್ಯವಹಾರದೊಂದಿಗೆ ಸ್ವ-ಸಹಾಯ ಗುಂಪುಗಳ ಪರಿಕಲ್ಪನೆಯನ್ನು ಅಳವಡಿಸಿ ಹಾಲು ಉತ್ಪಾದಕ ಮಹಿಳೆಯರನ್ನು ಒಂದು ಕಡೆ ಸೇರಿಸಿ ಉಳಿತಾಯ ಪ್ರವೃತ್ತಿಯನ್ನು ರೂಢಿಸಬಹುದು, ಆಂತರಿಕ ಸಾಲವನ್ನು ಅವಶ್ಯಕತೆಗೆ ತಕ್ಕಂತೆ ಪಡೆಯಬಹುದು, ಈ ಸಾಲದ ಮೊತ್ತದಿಂದ ರಾಸುಗಳ ಖರೀಧಿಯನ್ನು ಪ್ರೋತ್ಸಾಹಿಸಿ ಹೈನುಗಾರಿಕೆ ಮಾಡುವರ ಸಂಖ್ಯೆ ಹೆಚ್ಚಿಸಬಹುದಾಗಿದೆ, ಹಸುಗಳ ಖರಿದಿಗಾಗಿ ಸಾಲದ ಸೌಲಭ್ಯ ಒದಗಿಸುವುದು, ಪ್ರತಿ ಹಾಲು ಉತ್ಪಾದಕರಿಗೆ ಸಂಘದಿಂದ ಕನಿಷ್ಟ 50 ರಿಂದ 100 ಲೀಟರ್ ಹಾಲು ಉತ್ಪಾದನೆಯಗಬೇಕು, ರಾಸು/ಜಾನುವಾರಗಳಿಗೆ ಕಡ್ಡಾಯವಾಗಿ ವಿಮೇ ಮಾಡುವುದು, ಸಹಕಾರ ಸಂಘದಲ್ಲಿ ಗುಣಮಟ್ಟದ ಹಾಲು ಖರೀದಿಗೆ ಒಕ್ಕೂಟ ಆಸಕ್ತಿವಹಿಸಿದೆ. ನಾಳೆಯಿಂದಲೇ ಹಾಲು ಸಂಗ್ರಹಣೆಗಾಗಿ ಬೆಳಿಗ್ಗೆ ಮತ್ತು ಸಂಜೆ ಕೆ.ಎಂ.ಎಫ್.ವಾಹನಗಳು ಬರಲಿವೆ ಎಂದರು.

ಈ ಸಂಧರ್ಭದಲ್ಲಿ ಸಂಘದ ಅಧ್ಯಕ್ಷರು ಪ್ರಮೀಳಾ ಭೂಪಾಲ್ ನಾಡಗೌಡ, ಸಂಜೀವಿನಿ ತಾಲೂಕ ಕಾರ್ಯಕ್ರಮ ವ್ಯವಸ್ಥಾಪಕರು ಈರಪ್ಪ ಗುರಿಕಾರ, ಕೃಷಿ-ತಾಲೂಕ ವ್ಯವಸ್ಥಾಕರು ಮಲ್ಲಪ್ಪ ಗಾಳಾಪೂಜಿ, ಕೌಶಲ್ಯ ವಲಯ ಮೇಲ್ವಿಚಾರಕರು ಬಸವರಾಜ ಕಟ್ಟಿಮನಿ ಹಾಗೂ ಕಚೇರಿಯ ಶಿವಶರಣಪ್ಪ ಕಂದಗಲ್, ಗ್ರಾಮ ಪಂಚಾಯತ ಸದಸ್ಯರು ವಿಜಯಕುಮಾರ ಹೋಸಗೌಡ್ರು, ಸಂಗಣ್ಣ ಆನಂದಗಲ್, ದೇವಪ್ಪ ನೀರಲಕೇರಿ, ಶಂಕ್ರಣ್ಣ, ಆದಮ್ಮ ಯಮನೂರು, ಆದಮ್ಮ, ದ್ಯಾಮವ್ವ, ಹಚ್ಚಮ್ಮ ಹಾಗೂ ಗ್ರಾಮದ ರೈತರು ಸೇರಿದಂತೆ ಇದ್ದರು.

# ಬೇಸಿಗೆ ಶಿಬಿರದ ಸಮಾರೋಪ

ಹೊಸಮನಿ, ಶಿಕ್ಷಕರಾದ ಶರಣಯ್ಯಸ್ವಾಮಿ, ದುರುಗಪ್ಪ ಅಮರವಾತಿ, ಖಾದರ್ ಪಾಶ, ವಾಣಿಶ್ರೀ, ರೇಣುಕಾ, ಶಿವಪ್ರಸಾದ್ ರವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ತಾ.ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾದ ಹರಿಹಾರಪಾಟೀಲ್, ಪುರಸಭೆ ಸದಸ್ಯರಾದ ರೇವಣಸಿದ್ದಯ್ಯಸ್ವಾಮಿ, ಬಸವರಾಜ ಮೇಟಿ,ಜಗದೀಶ್ ಓತ್ತೂರ್,ಬಸವರಾಜ ಸಾಹುಕರ್ ಕುರ್ಡಿ,ಶಿವಲಿಂಗಯ್ಯಸ್ವಾಮಿ,ಪ್ರದೀಪ್ ಪಾಟೀಲ್,ಶರಣಪ್ಪ ಹೋಸಮನಿ,ಹೋಯ್ಸಳ ಸ್ವಾಮಿ,ವಿಜಯ ಮಹಾಂತೇಶ ಸ್ವಾಮಿ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

# ಪೋಷಕತ್ವ ಯೋಜನೆಯ ಅರಿವು ಮತ್ತು ಜಾಗೃತಿ ಕಾರ್ಯಕ್ರಮ

ಆದೇಶದ ಮೇರೆಗೆ ಜೈವಿಕ ಕುಟುಂಬವಲ್ಲದ ಬೇರೊಂದು ಕುಟುಂಬಕ್ಕೆ ತಾತ್ಕಾಲಿಕ ಅಥವಾ ವಿಸ್ತರಿಸಲ್ಪಟ್ಟ ಅವಧಿಯವರಿಗೆ ಎರಡು ವರ್ಷಕ್ಕೆ ಮೀರದ ಅವಧಿವರೆಗೆ ಮಗುವನ್ನು ಕಲ್ಪಿಸಿ ಕೊಡುವ ಉದ್ದೇಶವಾಗಿದೆ ಎಂದರು, ಅಬ್ದುಲ್ ನಿರೂಪಿಸಿದರು, ಮಲ್ಲಮ್ಮ ಸ್ವಾಗತಿಸಿದರು, ಚೈಲ್ಡ್ ಫಂಡ್ ಸಿಬ್ಬಂದಿಗಳು ಮತ್ತು ಉಪಸ್ಥಿತರಿದ್ದರು.

## ಆಲಮಟ್ಟಿ-ಹುಣಸಗಿ-ಯಾದಗಿರಿ ರೈಲು ಮಾರ್ಗ ಸಮೀಕ್ಷೆಗೆ ಹಸಿರು ನಿಶಾನೆ!

ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸಲಿದೆ. ಇದು ಪ್ರಾದೇಶಿಕ ಅಭಿವೃದ್ಧಿ ಮತ್ತು ಸಮಗ್ರ ಬೆಳವಣಿಗೆಗೆ ದೊಡ್ಡ ಉತ್ತೇಜನ ನೀಡಲಿದೆ" ಎಂದು ಹರ್ಷ ವ್ಯಕ್ತಪಡಿಸಿದರು.

ರೈಲ್ವೆ ಸಚಿವಾಲಯವು ತ್ವರಿತವಾಗಿ ಸ್ಪಂದಿಸಿದ್ದಕ್ಕಾಗಿ ಸಂಸದ ಜಿ.ಕುಮಾರ ನಾಯಕ ಅವರು ಯಾದಗಿರಿ ಜಿಲ್ಲೆಯ ಪರವಾಗಿ ಕೃತಜ್ಞತೆಗಳನ್ನು ಸಲ್ಲಿಸಿದ್ದಾರೆ. ಈ ಬೆಳವಣಿಗೆಯು ಪ್ರದೇಶದ ಜನರಲ್ಲಿ ಸಂತಸ ಮೂಡಿಸಿದೆ.

## ಇಒ ಚಮತ್ಕಾರದಿಂದ ಹಣ ದುರ್ಬಳಕೆ

# ದೇವರಭೂಪರ ಗ್ರಾಪಂ 15ನೇ ಹಣಕಾಸು ಹಣ ದುರುಪಯೋಗ ಕರವೇ ಆರೋಪ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು ,ಮೇ.16–** ತಾಲೂಕಿನ ದೇವರಭೂಪೂರು ಗ್ರಾಮ ಪಂಚಾಯತಿ 15ನೇ ಹಣಕಾಸು ಯೋಜನೆಯಲ್ಲಿ ಹಣವನ್ನು ದುರುಪಯೋಗ ಮಾಡಿದ್ದಾರೆ ಎಂದು ಕರವೇ ತಾಲ್ಲೂಕು ಅಧ್ಯಕ್ಷ ಜಿಲಾನಿಪಾಷ ನೇತೃತ್ವದಲ್ಲಿ ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿದರು.

ತಾಲೂಕಿನ ದೇವರಭೂಪರು ಗ್ರಾಮ ಪಂಚಾಯತಿಯ ಪಿಡಿಓ ಹಾಗೂ ಅಧ್ಯಕ್ಷರು ಸೇರಿ ಕೊಂಡು ಅಭಿವೃದ್ಧಿ ಕಾರ್ಯಗಳಿಗೆ ಬಂದಂತಹ ಅನುದಾನವನ್ನು ದುರುಪಯೋಗ ಪಡಿಸಿಕೊಂಡು ಸರ್ಕಾರದ ಹಣವನ್ನು ಲೂಟಿ ಮಾಡುತ್ತಿದ್ದಾರೆ. ತಮಗೆ ಮನಬಂದಂತೆ ಕ್ರೀಯಾ ಯೋಜನೆ ರೂಪಿಸಿ



ಕಾಮಗಾರಿಗಳನ್ನು ನಿರ್ವಹಿಸದೇ ನಕಲಿ ಬಿಲ್‌ಗಳನ್ನು ಸೃಷ್ಟಿಸಿ ಅನುದಾನವನ್ನು ಎತ್ತುವಳಿ ಮಾಡಿ ಸರ್ಕಾರಕ್ಕೆ ನಷ್ಟವನ್ನು ಉಂಟು ಮಾಡುತ್ತಿದ್ದಾರೆ.15ನೇ ಹಣಕಾಸು ಯೋಜನೆಯಡಿಯಲ್ಲಿ ಬಂದ ಅನುದಾನದಲ್ಲಿ ಸುಮಾರು 10,66.230 ಹಣವನ್ನು ಪಿಡಿಓ ದೇವಮ್ಮ ಹಾಗೂ ಗ್ರಾಮ ಪಂಚಾಯತಿ ಅಧ್ಯಕ್ಷ ನಿಂಗಪ್ಪ ಹಾಗೂ ಕಾರ್ಯನಿರ್ವಾಹಕ ಅಧಿಕಾರಿ ಮೂರು ಜನ ಸೇರಿ ಕೊಂಡು ಮೇಲ್ಕಾಣಿಸಿದ ಹಣವನ್ನು ದುರುಪಯೋಗ ಪಡಿಸಿಕೊಂಡಿದ್ದಾರೆ. ಅಷ್ಟು ಮೊತ್ತದ ಹಣವನ್ನು ಯಾವುದೇ ಕಾಮಗಾರಿಯನ್ನು ಮಾಡದೇ ನಕಲಿ ಬಿಲ್‌ಗಳನ್ನು ಸೃಷ್ಟಿಸಿ ಸಂಪೂರ್ಣ ಹಣವನ್ನು ಲಫಟಾಯಿಸಿದ್ದಾರೆ.ಸರ್ಕಾರ ಗ್ರಾಮಗಳಿಗೆ ಅಭಿವೃದ್ಧಿಗಾಗಿ ಬಿಡಗಡೆಗೊಳಿಸಿದ ಸಾರ್ವಜನಿಕ ಹಣವನ್ನು ಅಭಿವೃದ್ಧಿಯ ಹೆಸರಲ್ಲಿ ನುಂಗಿ ನೀರು ಕುಡಿದ ದೇವರಭೂಪೂರು ಗ್ರಾಮ ಪಂಚಾಯತಿ ಪಿಡಿಓ, ಅಧ್ಯಕ್ಷರ ಹಾಗೂ ಈ ಅವ್ಯವಾಹರದಲ್ಲಿ ಶಾಮೀಲಾಗಿರುವ ಕಾರ್ಯನಿರ್ವಾಹಕ ಅಧಿಕಾರಿಯ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಲೂಟಿ ಮಾಡಿರುವ ಸರ್ಕಾರದ ಹಣವನ್ನು ಮರಳಿ ಪಡೆಯಬೇಕು ಇಲ್ಲವಾದಲ್ಲಿ ಕಾರ್ಯಾಲಯ ಮುಂದೆ ಧರಣಿ ಹಮ್ಮಿಕೊಳ್ಳುತ್ತೆವೆ ಎಂದು ಎಚ್ಚರಿಕೆ ನೀಡಿದರು.

# ಪೊಲೀಸರಿಂದ ತಪ್ಪಿಸಿಕೊಳ್ಳಲು ಯತ್ನ ಕಳ್ಳನಿಗೆ ಗುಂಡೇಟು

**ಬಳ್ಳಾರಿ, ಮೇ.16–** ಕಳ್ಳತನ, ಮರ್ಡರ್ ಪ್ರಕರಣದಲ್ಲಿ ಭಾಗಿಯಾಗಿ ಪೊಲೀಸರಿಂದ ತಪ್ಪಿಸಿಕೊಳ್ಳಲು ಯತ್ನಿಸಿದ ಅಮರೇಶ್ ಎನ್ನುವವನ ಬಲಗಾಲಿಗೆ ಗುರುವಾರ ಸಿರುಗುಪ್ಪ ಸಿಪಿಐ ಹನುವಂತಪ್ಪ ಆರೋಪಿ ಬಲಗಾಲಿಗೆ ಗುಂಡೇಟು ಹೊಡೆದು ಹಿಡಿದಿದ್ದಾರೆ

ಕಳ್ಳತನ ಪ್ರಕರಣದಲ್ಲಿ ಮಹಜರ್ ಗೆ ಕರೆದುಕೊಂಡು ಹೋದಾಗ ವಿರೂಪಾಕ್ಷಗೌಡ, ಮಾರುತಿ ಎನ್ನುವ ಪೇದೆಗಳ ಮೇಲೆ ಹಲ್ಲೆ ಮಾಡಿ ತಪ್ಪಿಸಿಕೊಳ್ಳಲು ಯತ್ನಿಸಿದ್ದಾನೆ ಕಳ್ಳ ಅಮರೇಶ್ .

ಆಗ ಸಿಪಿಐ ಹನುಮಂತಪ್ಪ ಎರಡು ಬಾರಿ ಗಾಳಿಯಲ್ಲಿ ಗುಂಡು ಹಾರಿಸಿ ಎಚ್ಚರಿಕೆ ಕೊಟ್ಟರೂ ಹಲ್ಲೆ ಮುಂದುವರಿಸಿದ ಆರೋಪಿ ಮೇಲೆ ಆತ್ಮರಕ್ಷಣೆಗೆ ಸಿಪಿಐ ಹನುಮಂತಪ್ಪ ಗುಂಡು ಹಾರಿಸಿದ್ದಾರೆ.

ಸದ್ಯ ಆರೋಪಿ ಹಾಗೂ ಹಲ್ಲೆಗೊಳಗಾದ ಕನ್ಸಟೇಬಲ್ಸಗಳು ನಗರದ ಟ್ರಾಮಾ ಕೇರ್ ಸೆಂಟರ್ ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದು ಅವರ ಆರೋಗ್ಯವನ್ನು ಎಸ್ಪಿ ಶೋಭಾರಾಣಿ ವಿಚಾರಿಸಿದ್ದಾರೆ.

ಆರೋಪಿ ಅಮರೇಶ್ ವಿರುದ್ದ 30 ಕ್ಕಿಂತ ಹೆಚ್ಚು ಪ್ರಕರಣ



ದಾಖಲಾಗಿವೆ.ಕಳ್ಳತನ ಮಾತ್ರವಲ್ಲದೇ ಕೊಲೆ ಪ್ರಕರಣದಲ್ಲೂ ಭಾಗಿಯಾಗಿದ್ದ. ಕರ್ನಾಟಕ ಹಾಗೂ ಆಂದ್ರದ ಎರಡೂ ರಾಜ್ಯದಲ್ಲಿ ಕಳ್ಳತನ ಮಾಡುವಾಗ ಕೊಲೆ ಮಾಡಿದ್ದ ಆರೋಪ ಇದೆ. ಎರಡು ಮರ್ಡರ್, 6 ಡಕಾಯಿತಿ, 13 ಎಟಿಎಂ ಕಳ್ಳತನ ದಲ್ಲಿ ಆರೋಪಿ ಕೈವಾಡವಿದೆಯಂತೆ.

ಜಿಲ್ಲೆಯಲ್ಲಿ ಈ ವರ್ಷ ಇದು ಆರೋಪಿಗಳ ಕಾಲಿಗೆ ಪೊಲೀಸರು ಗುಂಡು ಹೊಡೆದಿರುವುದು ಮೂರನೇ ಪ್ರಕರಣ.

## ಜೂ. 1 ರಂದು ವೀರಶೈವ ಲಿಂಗಾಯತ ತೃತೀಯ ರಾಜ್ಯಮಟ್ಟದ ಬೃಹತ್ ವಧು-ವರರ ಸಮಾವೇಶ: ಕಕ್ಕೇರಿ ಚಂದ್ರಶೇಖರ



**ಬೀದರ,ಮೇ.16–** ಜೂನ್ 1, 2025 ರಂದು ರವಿವಾರ ಬೆ. 10 ರಿಂದ ಸಂಜೆ 6 ಗಂಟೆಯವರೆಗೆ ಕಲಬುರಗಿ ನಗರದ ಶ್ರೀ ಶರಣಬಸವೇಶ್ವರ ದೇವಾಲಯದ ಅನುಭವ ಮಂಟಪದಲ್ಲಿ ಶರಣಬಸವೇಶ್ವರ ಸಂಸ್ಥಾನ ಕಲಬುರಗಿ ಇವರ ಸಹಕಾರ ದೊಂದಿಗೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಜಿಲ್ಲಾ ಘಟಕ ಕಲಬುರಗಿ ಹಾಗೂ ಶಿವಪಾರ್ವತಿ ಮ್ಯಾಟ್ರಿಮುನಿಯಲ್ ಟ್ರಸ್ಟ್ ಕಲಬುರಗಿ ಇವರ ಸಹಯೋಗದಲ್ಲಿ ವೀರಶೈವ ಲಿಂಗಾಯತ ಸಮಾಜದ ಒಳಪಂಗಡಗಳ ತೃತೀಯ ರಾಜ್ಯಮಟ್ಟದ ಬೃಹತ್ ವಧು-ವರರ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಶಿವ-ಪಾರ್ವತಿ ಮ್ಯಾಟ್ರಿಮುನಿಯಲ್ ಟ್ರಸ್ಟ್ ಮುಖ್ಯಸ್ಥರು ಹಾಗೂ ಸಮಾವೇಶದ ಸಂಯೋಜಕರಾದ ಕಕ್ಕೇರಿ ಚಂದ್ರಶೇಖರ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು 2023ರಲ್ಲಿ ವಧು-ವರರ ಸಮಾವೇಶ ಆರಂಭವಾಗಿದ್ದು, ಅಂದು 485 ಹಾಗೂ 2024ರಲ್ಲಿ ದ್ವಿತೀಯ ಸಮಾವೇಶದಲ್ಲಿ 595 ವಧು-ವರರು ಪಾಲ್ಗೊಂಡಿದ್ದರು. ತೃತೀಯ ಸಮಾವೇಶದಲ್ಲಿ ಸಾವಿರಕ್ಕೂ ಅಧಿಕ ವಧು-ವರರು ಪಾಲ್ಗೊಳ್ಳುವ ನಿರೀಕ್ಷೆಯಿದೆ. ಈಗಾಗಲೇ 250ಕ್ಕೂ ಅಧಿಕ ವಧು-ವರರು ನೊಂದಣಿ ಮಾಡಿರುತ್ತಾರೆ. ನೊಂದಣಿ ಶುಲ್ಕ ರೂ. 1000 ನಿಗದಿಗೊಳಿಸಲಾಗಿದ್ದು, ಜೀವನ ಸಂಗಾತಿಯನ್ನು ಹೊಂದಿಸಿಕೊಳ್ಳುವ ವೇದಿಕೆ ಇದಾಗಿರುತ್ತದೆ ಎಂದರು.

ಶರಣಬಸವೇಶ್ವರ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಬಸವರಾಜ ದೇಶಮುಖ ಮಾತನಾಡಿ ಅಂದು ವೀರಶೈವ ಲಿಂಗಾಯತ ಸಮಾಜದ ಒಳಪಂಗಡಗಳಾದ ಜಂಗಮ, ಪಂಚಮಸಾಲಿ, ಬಣಜಿಗ, ದೀಕ್ಷಾ, ಆದಿ, ಬಣಗಾರ, ರೆಡ್ಡಿ ಮತ್ತು ಇನ್ನಿತರ ಒಳಪಂಗಡಗಳಾದ ಶಿವಸಿಂಪಿಗ, ನೇಕಾರ, ಕುಂಬಾರ, ಕಂಬಾರ, ಗಾಣಿಗ, ಸಜ್ಜನ ಗಾಣಿಗ, ಕರಿಕುಲ ಗಾಣಿಗ, ಕರುವಿನಶೆಟ್ಟಿ, ಹೂಗಾರ, ಕುಡ್ ವಕ್ಕಲಿಗ ಸೇರಿದಂತೆ ಮತ್ತಿತರ ಪಂಗಡದವರು ಈ ಸಮಾವೇಶದಲ್ಲಿ ಭಾಗವಹಿಸಬಹುದಾಗಿದೆ. ಕರ್ನಾಟಕ ಅದರಲ್ಲಿಯೂ ಕಲ್ಯಾಣ ಕರ್ನಾಟಕದ ಎಲ್ಲಾ ವರ್ಗದ ಸಮಾಜದ ಬಾಂಧವರು ವಿಶೇಷವಾಗಿ ಡಾಕ್ಟರ್, ಇಂಜಿನಿಯರ್, ರಾಜ್ಯದಲ್ಲಿ ಹಾಗೂ ಹೊರರಾಜ್ಯದಲ್ಲಿ ವಾಸವಾಗಿರುವ ಹಾಗೂ ಕೆಲಸ ನಿರ್ವಹಿಸುತ್ತಿರುವ ಸರ್ಕಾರಿ ಮತ್ತು ಅರೆ ಸರ್ಕಾರಿ ನೌಕರಸ್ಥರು, ವ್ಯಾಪಾರಸ್ಥರು, ರೈತ ಕುಟುಂಬದ ವಧು-ವರರು ಈ ಸಮಾವೇಶದಲ್ಲಿ ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಬಹುದು. ವಿಶೇಷವಾಗಿ ಮರು ಮದುವೆ ಬಯಸುವವರು ಹಾಗೂ ತಡವಾಗಿ ಮದುವೆಯಾಗುತ್ತಿರುವ ಸಮಾಜ ಬಾಂಧವರು ಈ ಸಮಾವೇಶದಲ್ಲಿ ಪಾಲ್ಗೊಳ್ಳಲು ವಿಶೇಷ ಅವಕಾಶ ಕಲ್ಪಿಸಲಾಗಿದೆ ಎಂದರು. ಸಮಾವೇಶದ ಸಾನಿಧ್ಯವನ್ನು ಶರಣಬಸವೇಶ್ವರ ಸಂಸ್ಥಾನ ಪೀಠದ 8ನೇ ಪೀಠಾಧಿಪತಿ ಪೂಜ್ಯ ಶ್ರೀ ಡಾ. ಶರಣಬಸಪ್ಪ ಅಪ್ಪ ಹಾಗೂ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷೆ ಮಾತೋಶ್ರೀ ಡಾ.ದಾಕ್ಷಾಯಿಣಿ ಎಸ್.ಅಪ್ಪ ವಹಿಸಲಿದ್ದಾರೆ. ಶರಣಬಸವೇಶ್ವರ ಸಂಸ್ಥಾನದ ಒಂಭತ್ತನೇ ಪೀಠಾಧಿಪತಿ ಪೂಜ್ಯ ಶ್ರೀ ಚಿ. ದೊಡ್ಡಪ್ಪ ಅಪ್ಪ ಸಮಾರಂಭ ಉದ್ಘಾಟಿಸುವರು. ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರಾದ ಡಾ. ಶರಣಪ್ರಕಾಶ ಆರ್ ಪಾಟೀಲ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ತಾನು ಹಾಗೂ ಅಖಿಲ ಭಾರತ ವೀ. ಲಿಂಗಾಯತ ಸಮಾಜದ ಜಿಲ್ಲಾಧ್ಯಕ್ಷ ಶರಣಕುಮಾರ ಮೋದಿ ಪಾಲ್ಗೊಳ್ಳುವರು ಎಂದರು.

ಅಖಿಲ ಭಾರತ ವೀ. ಲಿಂಗಾಯತ ಮಹಾಸಭೆ ಬೀದರ ಜಿಲ್ಲಾಧ್ಯಕ್ಷ ವೈಜಿನಾಥ ಕಮಠಾಣೆ ಮಾತನಾಡಿ ಇದೊಂದು ವೀರಶೈವ ಲಿಂಗಾಯತರ ಹಿತದೃಷ್ಟಿಯಿಂದ ಮಾಡಲಾದ ವಧು-ವರರ ಸಮಾವೇಶದ ವೇದಿಕೆಯಾಗಿದ್ದು, ಸಮಾವೇಶದಲ್ಲಿ ಕಡ್ಡಾಯವಾಗಿ ವಧು-ವರರು ಹಾಜರಿರಬೇಕು. ವಧು-ವರರ ಜೊತೆ ಇಬ್ಬರಿಗೆ ಮಾತ್ರ ಅವಕಾಶ ಇರುತ್ತದೆ. ವಧು-ವರರು ಬರುವಾಗ ಬಯೋಡಾಟಾ ಮತ್ತು 4 ಮತ್ತು 6 ಅಳತೆಯ ಭಾವಚಿತ್ರ ತರಬೇಕು. ಮುಂಚಿತವಾಗಿ ನೊಂದಣಿ ಮಾಡಿಸುವವರು ಸಂಯೋಜಕರ ಮುಖಾಂತರ 30-05-2025ರ ಒಳಗಾಗಿ ನೊಂದಣಿ ಮಾಡಿಸಿದವರ ಭಾವಚಿತ್ರ ಮಾತ್ರ ಪ್ರದರ್ಶಿಸಲಾಗುವುದು. ಸಮಾವೇಶದ ದಿನವೂ ಸಹ ನೊಂದಣಿ ಮಾಡಿಸಬಹುದು. ಆದರೆ ಫೋಟೊ ಪ್ರದರ್ಶನ ಮಾಡಲಾಗುವುದಿಲ್ಲ ಎಂದರು.

ಸುದ್ದಿಗೋಷ್ಠಿಯಲ್ಲಿ ಕಲಬುರಗಿಯ ಚನ್ನವೀರಪ್ಪ ಗುಡ್ಡಾ, ಸಂಜೀವಕುಮಾರ ಕಪಲಾಪುರ, ಸಿ.ಎಸ್.ಪಾಟೀಲ, ಮಾನಶೆಟ್ಟಿ ಬೆಳಕೇರಿ ಉಪಸ್ಥಿತರಿದ್ದರು.

# ಕಳ್ಳತನ ಪ್ರಕರಣ ಬೇಧಿಸಿ ಆರೋಪಿ ಬಂಧನ

**ಕಲಬುರಗಿ,ಮೇ.16–**ಚಿತ್ತಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ 4 ಕಳ್ಳತನ ಪ್ರಕರಣಗಳನ್ನು ಬೇಧಿಸಿ ಆರೋಪಿಯೊಬ್ಬನನ್ನು ಬಂಧಿಸಿ 4,40,400 ರೂ.ಮೌಲ್ಯದ ಬೆಳ್ಳಿ ಬಂಗಾರ ಮತ್ತು ನಗದನ್ನು ಜಪ್ತಿ ಮಾಡುವಲ್ಲಿ ಚಿತ್ತಾಪುರ ಠಾಣೆ ಪೊಲೀಸರು ಯಶಸ್ವಿಯಾಗಿದ್ದಾರೆ ಎಂದು ಎಸ್‌ಪಿ ಅಡ್ಡೂರು ಶ್ರೀನಿವಾಸಲು ತಿಳಿಸಿದರು.

ನಗರದ ಪೊಲೀಸ್ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿತ್ತಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬರುವ ಮಳಖೇಡ ರಸ್ತೆಯಲ್ಲಿರುವ ಮಹಮ್ಮದ್ ಸಮೀಯೋದ್ದೀನ್ ವರ ಹಾರ್ಡವೇರ್ ಅಂಗಡಿ ಶೆಟರ್ ಮುರಿದು ಕಳ್ಳರು ನಗದು ಹಣ ಕಳವು ಮಾಡಿಕೊಂಡು ಹೋಗಿದ್ದರು. ಈ ಸಂಬಂಧ ಅವರು ಚಿತ್ತಾಪುರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು.

ಈ ತಂಡ ತನಿಖೆ ನಡೆಸಿ ನಾಲವಾರ ಗ್ರಾಮದ ಸಿದ್ದಿಕ್ ತಂದೆ ಅಹಮ್ಮದ್ ಚಾವುಸ್ ಮತ್ತು ಉಬೇದ ತಂದೆ ಮಹಮ್ಮದ್ ಚಾವುಸ್ ಎಂಬುವವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿತ್ತು. ಇನ್ನೊಬ್ಬ ಆರೋಪಿ ನಿಜಾಮಗಾಟನ ಶೇಖಪಾಶಾ ತಂದೆ ಖಾಜಾ ಮೈನೊದ್ದೀನ್ ಕಳೆದ 11 ತಿಂಗಳಿಂದ ತಲೆ ಮರೆಸಿಕೊಂಡಿದ್ದ. ಆರೋಪಿ ವಾಡಿ ರೈಲ್ವೆ ನಿಲ್ದಾಣ ಹತ್ತಿರ



ಇರುವ ಬಗ್ಗೆ ಮಾಹಿತಿ ಬಂದ ಹಿನ್ನೆಲೆಯಲ್ಲಿ ತಂಡ ಅಲ್ಲಿಗೆ ಧಾವಿಸಿ ಆರೋಪಿ ಶೇಖಪಾಶಾನನ್ನು ಬಂಧಿಸಿ 4.40 ಲಕ್ಷ ರೂ.ಮೌಲ್ಯದ ಬೆಳ್ಳಿ, ಬಂಗಾರ ಮತ್ತು ನಗದು ಹಣ ವಶ ಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ ಎಂದು ತಿಳಿಸಿದರು.

ಕಳೆದ 11 ತಿಂಗಳಿಂದ ತಲೆ ಮರೆಸಿಕೊಂಡಿದ್ದ ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿರುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ಅವರು ಶ್ಲಾಘಿಸಿದರು.

ಸುದ್ದಿಗೋಷ್ಠಿಯಲ್ಲಿ ಹೆಚ್ಚುವರಿ ಎಸ್‌ಪಿ ಮಹೇಶ ಮೇಘಣ್ಣನವರ, ಶಹಾಬಾದ ಡಿಎಸ್‌ಪಿ ಶಂಕರಗೌಡ ಪಾಟೀಲ, ಚಿತ್ತಾಪುರ ಪಿಎಸ್‌ಐ ಚಂದ್ರಶೇಖರ ತಿಗಡಿ ಅವರ ಮಾರ್ಗದರ್ಶನದಲ್ಲಿ ಪಿಎಸ್‌ಐಗಳಾದ ಶ್ರೀಶೈಲ್ ಎಸ್.ಅಂಬಾಟಿ, ಚಂದ್ರಾಮಪ್ಪ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಬಲೂಚಿಸ್ತಾನ್ ಹಿಂದೂಗಳಿಗೆ ಪವಿತ್ರ ಸ್ಥಳ, : ಹಿಮಂತ ಬಿಸ್ವಾ ಶರ್ಮಾ



**ಗುವಾಹಟಿ, ಮೇ 16–** ಅಸ್ಸಾ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರು ಬಲೂಚಿಸ್ತಾನ್ ಹಿಂದೂಗಳಿಗೆ ಆಳವಾದ ಐತಿಹಾಸಿಕ ಮತ್ತು ಆಧ್ಯಾತ್ಮಿಕ ಮಹತ್ವವನ್ನು ಹೊಂದಿದೆ, ಪ್ರಾಥಮಿಕವಾಗಿ 51 ಪೂಜ್ಯ ಶಕ್ತಿ ಪೀಠಗಳಲ್ಲಿ ಒಂದಾದ ಹಿಂಗ್ಲಾಜ್ ಮಾತಾ ದೇವಾಲಯದ ಪವಿತ್ರ ನೆಲೆಯಾಗಿದೆ ಎಂದು ಹೇಳಿದ್ದಾರೆ.

ಹಿಂಗೋಲ್ ರಾಷ್ಟ್ರೀಯ ಉದ್ಯಾನವನದ ಒರಟಾದ ಭೂಪ್ರದೇಶದಲ್ಲಿ ನೆಲೆಗೊಂಡಿರುವ ಈ ದೇವಾಲಯವು ಸತಿ ದೇವಿಯ ತಲೆ ಬಿದ್ದ ಸ್ಥಳವನ್ನು ಗುರುತಿಸುತ್ತದೆ ಎಂದು ನಂಬಲಾಗಿದೆ. ಇದು ಶಕ್ತಿ ಧರ್ಮದ ಅತ್ಯಂತ ಪವಿತ್ರ ಸ್ಥಳಗಳಲ್ಲಿ ಒಂದಾಗಿದೆ ಎಂದು ಮುಖ್ಯಮಂತ್ರಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.ಶತಮಾನಗಳಿಂದ, ವಿಶೇಷವಾಗಿ ಸಿಂಧಿ, ಭಾವಸರ್ ಮತ್ತು ಚರಣ್ ಸಮುದಾಯಗಳಿಂದ ಬಂದ ಹಿಂದೂ ಯಾತ್ರಿಕರು ಈ ದೇವಾಲಯದಲ್ಲಿ ಆಶೀರ್ವಾದ ಪಡೆಯಲು ಮರುಭೂಮಿಗಳಾದ್ಯಂತ ಕಠಿಣ ಪ್ರಯಾಣಗಳನ್ನು ಕೈಗೊಂಡಿದ್ದಾರೆ ಎಂದು ಅವರು ಹೇಳಿದರು.

ಅದರ ಧಾರ್ಮಿಕ ಪ್ರಾಮುಖ್ಯತೆಯನ್ನು ಮೀರಿ, ಬಲೂಚಿಸ್ತಾನ್ ಉಪಖಂಡದ ವಿಭಜನೆಗೆ ಬಹಳ ಹಿಂದೆಯೇ ಈ ಪ್ರದೇಶದಲ್ಲಿ ಹಿಂದೂಗಳ ಪ್ರಾಚೀನ ಸಾಂಸ್ಕೃತಿಕ ಉಪಸ್ಥಿತಿಯ ಹೃದಯಸ್ಪರ್ಶಿ ಜ್ಞಾಪನೆಯಾಗಿ ಕಾರ್ಯನಿರ್ವಹಿಸುತ್ತದೆ ಎಂದು ಸಿಎಂ ಹೇಳಿದರು.

ಈ ದೇವಾಲಯವನ್ನು ಬಲೂಚ್ ಜನರು ಸಹ ಆಳವಾಗಿ ಗೌರವಿಸುತ್ತಾರೆ, ಅವರು ಇದನ್ನು ಪ್ರೀತಿಯಿಂದ ನಾನಿ ಮಂದಿರ ಎಂದು ಕರೆಯುತ್ತಾರೆ. ಇದು ಅಂತರ–ಕೋಮು ಭಕ್ತಿ ಮತ್ತು ಹಂಚಿಕೆಯ ಪರಂಪರೆಯ ಅಪರೂಪದ ಪರಂಪರೆಯನ್ನು ಪ್ರತಿಬಿಂಬಿಸುತ್ತದೆ ಎಂದು ಶರ್ಮಾ ಬರೆದುಕೊಂಡಿದ್ದಾರೆ.

# ವಿಶ್ವ ಉಗ್ರ ಸಂಘಟನೆಗಳ ಪಟ್ಟಿಗೆ ಟಿಆರ್‌ಎಫ್ ಸೇರ್ಪಡೆಗೆ ಭಾರತ ಯತ್ನ



**ವಿಶ್ವಸಂಸ್ಥೆ, ಮೇ 16–** ಪಹಲ್ಗಾಮ್ ದಾಳಿಯಲ್ಲಿ ಭಾಗಿಯಾಗಿದೆ ಎಂದು ಆರೋಪಿಸಲಾಗಿರುವ ಎಲ್‌ಇಟಿ ಪ್ರತಿನಿಧಿ ದಿ ರೆಸಿಸ್ಟೆನ್ಸ್ ಫ್ರಂಟ್ ಅನ್ನು ವಿಶ್ವಸಂಸ್ಥೆಯಲ್ಲಿ ಪಟ್ಟಿ ಮಾಡಲಾದ ಭಯೋತ್ಪಾದಕ ಸಂಘಟನೆ ಎಂದು ಹೆಸರಿಸಲು ನವದೆಹಲಿ ಪ್ರಯತ್ನಗಳನ್ನು ಚುರುಕುಗೊಳಿಸಿದೆ.

ಈ ಹಿನ್ನೆಲೆಯಲ್ಲಿ ಭಾರತೀಯ ನಿಯೋಗವು ಇಲ್ಲಿ ವಿಶ್ವಸಂಸ್ಥೆಯ ಭಯೋತ್ಪಾದನಾ ನಿಗ್ರಹ ಕಚೇರಿ (ಯುಎನ್‌ಒಸಿಟಿ) ಮತ್ತು ಭಯೋತ್ಪಾದನಾ ನಿಗ್ರಹ ಸಮಿತಿ ಕಾರ್ಯನಿರ್ವಾಹಕ ನಿರ್ದೇಶನಾಲಯದ ಉನ್ನತ ಅಧಿಕಾರಿಗಳನ್ನು ಭೇಟಿ ಮಾಡಿದೆ.

ಪಾಕಿಸ್ತಾನ ಮೂಲದ ಭಯೋತ್ಪಾದಕ ಗುಂಪು ಲಷ್ಕರ್–ಎ–ತೈಬಾ (ಎಲ್‌ಇಟಿ) ನ ಒಂದು ಮುಂಭಾಗವಾದ ರೆಸಿಸ್ಟೆನ್ಸ್ ಫ್ರಂಟ್ (ಟಿಆರ್‌ಎಫ್), ಪಹಲ್ಗಾಮ್ ದಾಳಿಯ ಹೊಣೆಯನ್ನು ಹೊತ್ತುಕೊಂಡಿತ್ತು. ನ್ಯೂಯಾರ್ಕ್‌ನಲ್ಲಿರುವ ಭಾರತೀಯ ತಾಂತ್ರಿಕ ತಂಡವು ಇಂದು 1267 ನಿರ್ಬಂಧಗಳ ಸಮಿತಿಯ ಮೇಲ್ವಿಚಾರಣಾ ತಂಡ ಮತ್ತು ವಿಶ್ವಸಂಸ್ಥೆಯ ಇತರ ಪಾಲುದಾರ ರಾಷ್ಟ್ರಗಳೊಂದಿಗೆ ಸಂವಹನ ನಡೆಸುತ್ತಿದೆ.

ಅವರು ವಿಶ್ವಸಂಸ್ಥೆಯ ಭಯೋತ್ಪಾದನಾ ನಿಗ್ರಹ ಕಚೇರಿ ಮತ್ತು ಭಯೋತ್ಪಾದನಾ ನಿಗ್ರಹ ಸಮಿತಿಯ ಕಾರ್ಯನಿರ್ವಾಹಕ ನಿರ್ದೇಶನಾಲಯದೊಂದಿಗೂ ಸಭೆ ನಡೆಸಲಿದ್ದಾರೆ ಎಂದು ಮೂಲಗಳು ಗೆ ತಿಳಿಸಿವೆ.

ಏಪ್ರಿಲ್ 22 ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿ ಮತ್ತು ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ಭಾರತ ಪ್ರಾರಂಭಿಸಿದ ಪ್ರತೀಕಾರದ ಆಪರೇಷನ್ ಸಿಂಧೂರ್ ನಂತರ ಈ ಬೆಳವಣಿಗೆ ಸಂಭವಿಸಿದೆ.

# ಸಿಂಧೂ ನದಿ ನೀರಿಗಾಗಿ ಭಾರತದ ಬಳಿ ಅಂಗಲಾಚುತ್ತಿರುವ ಪಾಕಿಸ್ತಾನ



**ನವದೆಹಲಿ, ಮೇ.16–** ಸಿಂಧೂ ನದಿ ಜಲ ಒಪ್ಪಂದದ ಅಮಾನತನ್ನು ಮರುಪರಿಶೀಲಿಸಿ ಎಂದು ಭಾರತಕ್ಕೆ ಪಾಕ್ ಮನವಿ ಮಾಡಿಕೊಂಡಿದೆ.ಪಹಲ್ಗಾಮ್ ದಾಳಿಯ ನಂತರ ಭಾರತ ಪಾಕಿಸ್ತಾನದೊಂದಿಗಿನ ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸಿತ್ತು. ಇದರಿಂದ ಪಾಕಿಸ್ತಾನದಲ್ಲಿ ನೀರಿನ ಬಿಕ್ಕಟ್ಟು ತಲೆದೋರಿದೆ.

ಕದನವಿರಾಮ ಘೋಷಣೆಯಾದರೂ ಪಾಕಿಸ್ತಾನ ಭಯೋತ್ಪಾದನೆಗೆ ನೀಡುವ ಬೆಂಬಲವನ್ನು ಪೂರ್ತಿಯಾಗಿ ನಿಲ್ಲಿಸುವವರೆಗೂ ಸಿಂಧೂ ಜಲ ಒಪ್ಪಂದ ಅಮಾನತ್ತಾಗಿರುತ್ತದೆ. ಎಂದು ಭಾರತ ಖಚಿತಪಡಿಸಿದ್ದಕ್ಕೆ ಮೊದಲು ಪಾಕಿಸ್ತಾನ ಅಹಂಕಾರದ ಮಾತುಗಳನ್ನಾಡಿತ್ತು.

ಭಾರತ ಸಿಂಧೂ ಜಲ ಒಪ್ಪಂದ ಅಮಾನತನ್ನು ಕೈಬಿಡದಿದ್ದರೆ ಕದನವಿರಾಮಕ್ಕೆ ಯಾವುದೇ ಅರ್ಥವಿರುವುದಿಲ್ಲ, ನಮಗೆ ನೀರು ಬಿಡದಿದ್ದರೆ ಅದನ್ನು ಹೇಗೆ ಪಡೆಯಬೇಕೆಂಬುದು ನಮಗೆ ಗೊತ್ತಿದೆ ಎಂದು ಪಾಕ್ ಹೇಳಿಕೆ ನೀಡಿತ್ತು. ಅದಕ್ಕೂ ಭಾರತ ಜಗ್ಗದಿದ್ದಾಗ ಇದೀಗ ಮಾತುಕತೆಯ ಮೂಲಕ ಭಾರತದ ಮನವೊಲಿಸಲು ಮುಂದಾಗಿದೆ.

ಪಾಕಿಸ್ತಾನದ ಜಲಸಂಪನ್ಮೂಲ ಕಾರ್ಯದರ್ಶಿ ಸೈಯದ್ ಅಲಿ ಮುರ್ತಾಜಾ ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸುವ ಕೇಂದ್ರ ಸಚಿವ ಸಂಪುಟದ ನಿರ್ಧಾರದ ಬಗ್ಗೆ ಭಾರತವು ಔಪಚಾರಿಕವಾಗಿ ತಿಳಿಸಿದ್ದಕ್ಕೆ ಪ್ರತಿಕ್ರಿಯಿಸಿದ್ದಾರೆ. ಅವರು ತಮ್ಮ ಸರ್ಕಾರದ ಪರವಾಗಿ ಭಾರತ ಆಕ್ಷೇಪಿಸುವ ನಿರ್ದಿಷ್ಟ ಷರತ್ತುಗಳನ್ನು ಚರ್ಚಿಸಲು ಮುಂದಾಗಿದ್ದಾರೆ ಎಂದು ತಿಳಿದುಬಂದಿದೆ. ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸುವ ನಿರ್ಧಾರವನ್ನು ಮರುಪರಿಶೀಲಿಸುವಂತೆ ಒತ್ತಾಯಿಸಿ ಪಾಕಿಸ್ತಾನ ಭಾರತಕ್ಕೆ ಪತ್ರ ಬರೆದಿದೆ ಎಂದು ವರದಿಯಾಗಿದೆ.

ಸಿಂಧೂ ಜಲ ಒಪ್ಪಂದವು 6 ದಶಕಗಳಿಗೂ ಹೆಚ್ಚು ಕಾಲ ಉಳಿದುಕೊಂಡಿರುವ ಪ್ರಮುಖ ನೀರು ಹಂಚಿಕೆ ಒಪ್ಪಂದವಾಗಿದೆ. ಏಪ್ರಿಲ್ 22ರಂದು ಜಮ್ಮು ಮತ್ತು ಕಾಶ್ಮಿ?ರದ ಪಹಲ್ಗಾಮ್‌ನಲ್ಲಿ ನಡೆದ ಮತ್ತೊಂದು ಪಾಕಿಸ್ತಾನ ಬೆಂಬಲಿತ ಭಯೋತ್ಪಾದಕ ದಾಳಿಯ ನಂತರ ಭಾರತ 1960ರ ಒಪ್ಪಂದವನ್ನು ಸ್ಥಗಿತಗೊಳಿಸಿತ್ತು.

1960ರ ಒಪ್ಪಂದದ ಪ್ರಕಾರ, ಭಾರತದಲ್ಲಿ ನೆಲೆಗೊಂಡಿರುವ ಸಿಂಧೂ ನದಿ ವ್ಯವಸ್ಥೆಯಿಂದ ಸಾಗಿಸಲ್ಪಡುವ ಒಟ್ಟು ನೀರಿನಲ್ಲಿ ಭಾರತವು ಸುಮಾರು ಶೇ. 30ರಷ್ಟನ್ನು ಪಡೆಯಿತು. ಉಳಿದ ಶೇ. 70ರಷ್ಟನ್ನು ಪಾಕಿಸ್ತಾನ ಪಡೆಯಿತು. ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸುವುದರೊಂದಿಗೆ, ಸ್ಥಗಿತಗೊಂಡಿರುವ ಜಲವಿದ್ಯುತ್ ಯೋಜನೆಗಳನ್ನು ಪೂರ್ಣಗೊಳಿಸುವತ್ತ ನರೇಂದ್ರ ಮೋದಿ ಸರ್ಕಾರವು ಪ್ರಮುಖ ಕ್ರಮಗಳನ್ನು ತೆಗೆದುಕೊಳ್ಳುವ ನಿರೀಕ್ಷೆಯಿದೆ.

# ಕರ್ನಲ್ ಸೋಫಿಯಾ ಅವರಿಗೆ ಅವಮಾನ : ಪರಮೇಶ್ವರ್ ಆಕ್ಷೇಪ

**ಬೆಂಗಳೂರು,ಮೇ.16–** ಲೆಫ್ಟಿನೆಂಟ್ ಕರ್ನಲ್ ಸೋಫಿಯಾ ಖುರೇಷಿ ಕರ್ನಾಟಕದ ಸೊಸೆಯಾಗಿದ್ದು, ಮಧ್ಯ ಪ್ರದೇಶದ ಸಚಿವರ ಆಕ್ಷೇಪಾರ್ಹ ಹೇಳಿಕೆ ಸೂಫಿಯಾರವರಿಗಷ್ಟೇ ಅಲ್ಲ ಇಡೀ ರಾಜ್ಯಕ್ಕೆ ಮಾಡಿದ ಅಪಮಾನವಾಗಿದೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ಆಕ್ಷೇಪಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸೋಫಿಯಾ ಅವರ ಪತಿ ಬೆಳಗಾವಿ ಜಿಲ್ಲೆಯವರು. ನಿನ್ನೆ ಬೆಳಗಾವಿಯ ಎಸ್ಪಿಯವರು ಹೇಳಿಕೆ ನೀಡಿ ಮಧ್ಯ ಪ್ರದೇಶದ ಸಚಿವರ ವಿರುದ್ಧ ಪ್ರಕರಣ ದಾಖಲಿಸಿರುವುದಾಗಿ ತಿಳಿಸಿದ್ದಾರೆ.

ಮುಂದೆ ಇದನ್ನು ಕೇಂದ್ರಸರ್ಕಾರದ ಗಮನಕ್ಕೆ ತಂದು ಟೀಕೆ ಮಾಡಿದ ವ್ಯಕ್ತಿಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಇದು ರಾಜ್ಯ ಮತ್ತು ದೇಶಕ್ಕೆ ಮಾ ಮಾಡಿದ ಅಪಮಾನ. ಸೂಕ್ತ ಸೂಕ್ಷ್ಮ ಪರಿಸ್ಥಿತಿಯಂತಹ ವೇಳೆಯಲ್ಲಿ ಇಂತಹ ಕೀಳು ಮನಸ್ಥಿತಿ ಯಾರಿಗೂ ಬರಬಾರದು ಎಂದರು. ಕೇಂದ್ರ ಸರ್ಕಾರ ಕರ್ನಾಟಕಕ್ಕೆ ತತ್‌ಕ್ಷಣಕ್ಕೆ 5.50 ಕೋಟಿ ರೂ. ನೀಡಬೇಕು. ಆದರೆ ಪ್ರತೀಬಾರಿ ಅನುದಾನ ನೀಡಿಕೆಯಲ್ಲಿ ವಿಳಂಬವಾಗುತ್ತಲೇ ಇದೆ. ಇದಕ್ಕಾಗಿ ನಿನ್ನೆ ಮುಖ್ಯಮಂತ್ರಿಗಳು ಸಂಸದರ ಜೊತೆ ಸಭೆ ನಡೆಸಿ ಗಮನಕ್ಕೆ ತಂದಿದ್ದಾರೆ. ಕೇಂದ್ರ ಸರ್ಕಾರಕ್ಕೆ ಪತ್ರ ಬರೆದು ಹಣ ಬಿಡುಗಡೆಗೆ ಒತ್ತಡ ಹೇರುವಂತೆ ಮನವಿ ಮಾಡಿದ್ದಾರೆ.

ಕೆಲವು ಸಂಸದರು ಸಭೆಗೆ ಗೈರುಹಾಜರಾದ ಬಗ್ಗೆ ಹೆಚ್ಚು ಚರ್ಚೆ ಮಾಡಲು ಬಯಸುವುದಿಲ್ಲ. ಅವರಿಗೆ ಅವರದೇ ಆದ ಕಾರ್ಯ ಒತ್ತಡಗಳಿರುತ್ತವೆ. ಆದರೆ ರಾಜ್ಯದ ಪರವಾಗಿ ಎಲ್ಲರೂ ಧ್ವನಿಯೆತ್ತಬೇಕು ಎಂಬುದು ನಮ್ಮ ಒತ್ತಾಯವಾಗಿದೆ. ಈ ಹಿಂದೆ ಅನುದಾನ ಸಿಗದೇ ಇದ್ದುದ್ದಕ್ಕಾಗಿ ದೆಹಲಿಗೆ ಹೋಗಿ ಪ್ರತಿಭಟನೆ ಮಾಡಬೇಕಾಯಿತು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವೆ ಒಳ್ಳೆಯ ಬಾಂಧವ್ಯ ಇರಬೇಕು. ಈ ಕಾರಣಕ್ಕಾಗಿ ನಿಯಮಾವಳಿಗಳಿವೆ. ಅದನ್ನು ಎರಡೂ ಕಡೆಯವರು ಅರ್ಥ ಮಾಡಿಕೊಳ್ಳಬೇಕು. ನಮಗೆ ಬರಬೇಕಾದಂತಹ ಅನುದಾನ ಕೊಟ್ಟರೆ ನಾವು ಒತ್ತಾಯ ಮಾಡುವುದಿಲ್ಲ, 2–3 ದಿನ ಹಿಂದೆಮುಂದೆಯಾದರೂ ಸಕಾಲಕ್ಕೆ ಹಣ ಬಿಡುಗಡೆಯಾಗುವಂತೆ ಕೇಂದ್ರ ಸರ್ಕಾರ ನೋಡಿಕೊಳ್ಳಬೇಕು ಎಂದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಜನ್ಮದಿನದ ಸಂದರ್ಭದಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಜಾರಿಯಾಗಿದೆ. ಡಿಕೆಶಿಯವರಿಗೆ ಹುಟ್ಟುಹಬ್ಬದ ಶುಭಹಾರೈಸುತ್ತೇನೆ. ಗ್ರೇಟರ್ ಬೆಂಗಳೂರು ಅವರ ಕಲ್ಪನೆ. ಇಂದಿನಿಂದ ಅದು ಜಾರಿಗೆ ಬಂದಿದೆ. ಹೊಸರೂಪ ಯಶಸ್ವಿಯಾಗಲಿ, ಸಣ್ಣಪುಟ್ಟ ಲೋಪಗಳು, ನ್ಯೂನತೆಗಳಿದ್ದರೂ ಅದನ್ನು ಸರಿಪಡಿಸಿಕೊಳ್ಳಲಿ, ಅವಕಾಶವಿದೆ. ಫಲಿತಾಂಶಕ್ಕಾಗಿ ಕಾದು ನೋಡುತ್ತೇವೆ ಎಂದರು.

ವಿಶ್ವದ ದೊಡ್ಡ ನಗರಗಳಲ್ಲಿ ಈ ರೀತಿಯ ಪರಿಕಲ್ಪನೆಗಳಿವೆ. ಬೆಂಗಳೂರಿನ ವಿಸ್ತೀರ್ಣತೆ ದೊಡ್ಡದಿದ್ದು, ಒಬ್ಬ ಅಧಿಕಾರಿ ಅದನ್ನು ನಿಭಾಯಿಸುವುದು ಕಷ್ಟ. ಅದಕ್ಕಾಗಿ ಅಧಿಕಾರದ ವಿಕೇಂದ್ರೀಕರಣವಾಗಿದೆ ಎಂದು ಹೇಳಿದರು. ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ಇದೇ 20 ರಂದು ಕಂದಾಯ



ಇಲಾಖೆಯಿಂದ ಬೃಹತ್ ಸಮಾವೇಶ ನಡೆಸಿ 50 ಸಾವಿರ ಜನರಿಗೆ ಹಕ್ಕುಪತ್ರಗಳನ್ನು ನೀಡಲಾಗುತ್ತಿದೆ. ಇದೊಂದು ಸರ್ಕಾರದ ಕಾರ್ಯಕ್ರಮ, ಲೋಕಸಭೆಯ ವಿರೋಧಪಕ್ಷದ ನಾಯಕ ರಾಹುಲ್ ಗಾಂಧಿ, ರಾಜ್ಯ ಸಭೆಯ ವಿರೋಧಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಮತ್ತಿತರರು ಭಾಗವಹಿಸುತ್ತಾರೆ ಎಂದರು.

ಸರ್ಕಾರದ ಸಾಧನಾ ಸಮಾವೇಶವನ್ನು ಬೇರೆ ದಿನ ಮಾಡಲಾಗುತ್ತದೆ. ಸದ್ಯಕ್ಕೆ ಕಂದಾಯ ಇಲಾಖೆಯಿಂದ ಜನರಿಗೆ ದಾಖಲೆ ಪತ್ರಗಳನ್ನು ನೀಡಲು ಬೃಹತ್ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಹೇಳಿದರು.

# ರಾಜ್ಯದ 12 ಕಡೆ ಏಕಕಾಲದಲ್ಲಿ ಲೋಕಾಯುಕ್ತ ದಾಳಿ

**ಬೆಂಗಳೂರು, ಮೇ 16–** ಇಂದು ಬೆಳಂಬೆಳಿಗ್ಗೆ ತಹಶೀಲ್ದಾರ್ ಸೇರಿ ಏಳು ಸರ್ಕಾರಿ ಅಧಿಕಾರಿಗಳ ಮನೆಗಳು ಮತ್ತು ಕಚೇರಿಗಳ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆದಿದೆ.ಅಕ್ರಮ ಆಸ್ತಿಗಳಿಕೆ ದೂರುಗಳು ಬಂದ ಹಿನ್ನೆಲೆಯಲ್ಲಿ ಸಮಗ್ರ ಪರಿಶೀಲನೆ ನಂತರ ಇಂದು ಏಕ ಕಾಲದಲ್ಲಿ ಬೆಂಗಳೂರು ಸೇರಿದಂತೆ ರಾಜ್ಯದ 12 ಕಡೆ ದಾಳಿ ನಡೆಸುವ ಮೂಲಕ ಭ್ರಷ್ಟ ಅಧಿಕಾರಿಗಳಿಗೆ ಶಾಕ್ ನೀಡಲಾಗಿದೆ.

ಕಲಬುರಗಿಯ ಅಕ್ಕಮಹಾದೇವಿ ಬಡಾವಣೆಯಲ್ಲಿರುವ ಯಾದಗಿರಿ ಜಿಲ್ಲೆಯ ಶಹಾಪುರ ತಾಲ್ಲೂಕಿನ ತಹಶೀಲ್ದಾರ್ ಉಮಾಕಾಂತ ಮನೆ ಕಚೇರಿ.ತೋಟದ ಮನೆ ಹಾಗು ಇತರ ಕೆಲವು ಕಡೆ ಲೋಕಾಯುಕ್ತ ದಾಳಿ ನಡೆದಿದೆ. ನಗದು ಹಣ, ಆಸ್ತಿ ದಾಖಲೆಗಳು ಸೇರಿ ಕೆಲವು ಸರ್ಕಾರಿ ದಾಖಲಾತಿಗಳು ಕೂಡ ಪತ್ತೆಯಾಗಿದ್ದು ಪರಿಶೀಲನೆ ಮಾಡಲಾಗಿದೆ.

ತುಮಕೂರಿನಲ್ಲಿ ನಿರ್ಮಿತಿ ಕೇಂದ್ರದ ಎಂಡಿ ರಾಜಶೇಖರ್ ಅವರ ನಿವಾಸ ಕಚೇರಿ ಹಾಗು ಅವರ ಸಹೋದರನ ಮನೆ ಸೇರಿ 7 ಕಡೆ ದಾಳಿ ನಡೆದಿದೆ. ಅಪಾರವ ಪ್ರಮಾಣದ ಚಿನ್ನಾಭರಣ ಆಸ್ತಿ ದಾಖಲೆ ನಗದು ಹಣ ಸೇರಿ ಹಲವು ಬೆಲೆಬಾಳುವ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.ಇನ್ನು ವಿಜಯಪುರ ನಗರದ ಸೆಂಟ್ ಜೋಸೆಫ್ ಶಾಲೆಯ ಹಿಂಭಾಗದಲ್ಲಿರುವ ಡಾ. ಬಿಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕಿ ರೇಣುಕಾ ಸಾತಾಲೆರ್ ನಿವಾಸದ ಮೇಲೆ ದಾಳಿ ಮಾಡಲಾಗಿದೆ.ವ್ಯಾಪಕವಾಗಿ ಭ್ರಷ್ಟಾಚಾರ ಆರೋಪ ಕೇಳಿಬಂದ ಹಿನ್ನಲೆಯಲ್ಲಿ ಈ ದಾಳಿ ನಡೆದಿದೆ. ಎಸ್ಪಿ ಟಿ. ಮಲ್ಲೇಶ್ ನೇತೃತ್ವದಲ್ಲಿ 6 ತಂಡ ದಾಳಿ ಮಾಡಿ ಅಕ್ರಮ ಸಂಪಾದನೆ ಬಯಲಿಗೆಳೆದಿದೆ.ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲೂಕಿನ ಬೋದನ ಹೊಸಹಳ್ಳಿಯಲ್ಲಿರುವ ಎಸ್‌ಡಿಎ ಅನಂತ್ ಅವರ ಮನೆ ಮೇಲೆ ಲೋಕಾಯುಕ್ತ ದಾಳಿ ಮಾಡಿದೆ. ದೇವನಹಳ್ಳಿ ಹಾಗೂ ಹೊಸಕೋಟೆಯಲ್ಲಿ ಭೂ ಮಂಜೂರಾತಿ ವಿಭಾಗದಲ್ಲಿ ಕೆಲಸ ಮಾಡಿದ್ದ ಅನಂತ್, ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಕೆ ಆರೋಪ ಹಿನ್ನೆಲೆ ಲೋಕಾ ದಾಳಿ ನಡೆಸಲಾಗಿದೆ.

ಹಲವೆಡೆ ನಿವೇಶನ ಕೃಷಿ ಜಮೀನು ಸೇರಿ ಹಲವು ಆಸ್ತಿ ದಾಖಲೆ ಪತ್ತೆ ಮಾಡಲಾಗಿದೆ ಎಂದು ಮೂಲಗಳು ತಿಳಿಸಿವೆ




ಅತ್ತ ಸೊಲ್ಲಾಪುರ ನಗರದ ಕೆಹೆಚ್ ಬಿ ಪ್ರದೇಶದಲ್ಲಿರುವ ನಿವಾಸದ ಮೇಲೂ ಡಿವೈಎಸ್‌ಪಿ ಸುರೇಶ ರೆಡ್ಡಿ ನೇತೃತ್ವದಲ್ಲಿ ದಾಳಿ ಮಾಡಲಾಗಿದ್ದು, ಮನೆಯಲ್ಲಿರುವ ದಾಖಲೆಗಳನ್ನು ಪರಿಶೀಲನೆ ಮಾಡಲಾಗಿದೆ.ಮಂಗಳೂರಿನ ಬಿಜ್ಜೈನಲ್ಲಿರುವ ಕಂದಾಯ ಇಲಾಖೆ ಸರ್ವೆ ಮೇಲ್ವಿಚಾರಕ ಮಂಜುನಾಥ್ ಮನೆ ಹಾಗೂ ಕಚೇರಿ ಮೇಲೆ ಲೋಕಾಯುಕ್ತ ದಾಳಿ ನಡೆದಿದೆ ದಕ್ಷಿಣ ಕನ್ನಡ ಲೋಕಾಯುಕ್ತ ಎಸ್‌ಪಿ ಕುಮಾರಚಂದ್ರ ನೇತೃತ್ವದಲ್ಲಿ ನಡೆಸಲಾಗುತ್ತಿದ್ದು ಹಲವು ಚರಚರ ಆಸ್ತಿ ದಾಖಲೆ ವಶಪಡಿಸಿಕೊಳ್ಳಲಾಗಿದೆ.

ರಾಜಧಾನಿ ಬೆಂಗಳೂರಿನಲ್ಲಿ 8ಕ್ಕೂ ಹೆಚ್ಚು ಕಡೆ ಲೋಕ ದಾಳಿ ನಡೆದಿದೆ. ಕಾನೂನು ಮಾಪನಶಾಸ್ತ್ರದ ಅಧೀಕ್ಷಕ ಹೆಚ್ ನಟರಾಜ್ ಅವರ ಮನೆ ಕಚೇರಿ ಮೇಲೆ ದಾಳಿ ನಡೆದಿದೆ. ಹಲವೆಡೆ ವಾಣಿಜ್ಯ ಸಂಕೀರ್ಣ, ಕೈಗಾರಿಕಾ ಶೆಡ್ ಸೇರಿ ಹಲವು ಆಸ್ತಿ ಪತ್ರ ಪತ್ತೆಯಾಗಿದೆ. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯ, ಹೆಚ್ಚುವರಿ ನಿರ್ದೇಶಕರು ಟಿ.ವಿ ಮುರಳಿ ಅವರಿಗೆ ಲೋಕಾ ಶಾಕ್ ನೀಡಿದೆ.ಬೆಂಗಳೂರಿನಲ್ಲರುವ ಮನೆ ಸೇರಿ ಅವರ ಸಂಬಂಧಿಕರು ಮನೆ ಮೇಲೂ ದಾಳಿ ನಡೆದಿದೆ.ವಶಕ್ಕೆ ಪಡೆದು ವಸ್ತುಗಳ ಹಾಗು ಬೆಲೆ ಬಾಳುವ ವಸ್ತು ಬಗ್ಗೆ ಲೆಕ್ಕ ಹಾಕಲಾಗುತ್ತಿದೆ.

# 13 ದಿನದಲ್ಲಿ ರೈಡ್ 2.169 ಕೋಟಿ ಗಳಿಕೆ



**ನವದೆಹಲಿ, ಮೇ.16–** ಅಜಯ್ ದೇವಗನ್ ಮತ್ತು ರಿತೇಶ್ ದೇಶಮುಖ್ ಅಭಿನಯದ ರೈಡ್ 2 ಚಿತ್ರ ದೇಶ ಮತ್ತು ವಿದೇಶಗಳಲ್ಲಿ ಸಂಚಲನ ಮೂಡಿಸಿದೆ.

ಛಾವಾ ಚಿತ್ರವನ್ನು ಅಪವಾದವೆಂದು ಪರಿಗಣಿಸಿದರೆ, ಬಹಳ ಸಮಯದವರೆಗೆ ಹಿಂದಿ ಸಿನಿಮಾ ಗಲ್ಲಾಪೆಟ್ಟಿಗೆಯಲ್ಲಿ ಉತ್ತಮ ಪ್ರದರ್ಶನ ನೀಡಲು ಸಾಧ್ಯವಾಗಲಿಲ್ಲ.

ದಕ್ಷಿಣ ಚಿತ್ರಗಳ ಹೆಚ್ಚುತ್ತಿರುವ ಜನಪ್ರಿಯತೆಯು ಹಿಂದಿ ಚಿತ್ರರಂಗದ ಮೇಲೆ ಪ್ರಭಾವ ಬೀರಿದೆ ಎಂದು ಹೇಳುವುದು ತಪ್ಪಾಗಲಾರದು. ಆದರೆ ರಾಕುಮಾರ್ ಗುಪ್ತಾ ನಿರ್ದೇಶನದ ರೈಡ್ 2 ಚಿತ್ರದ ಶಕ್ತಿಶಾಲಿ ಕಥೆ ಮತ್ತು ಅದ್ಭುತ ರೋಮಾಂಚನವು ಮತ್ತೊಮ್ಮೆ ಪ್ರೇಕ್ಷಕರನ್ನು ಚಿತ್ರಮಂದಿರಕ್ಕೆ ಎಳೆದಿದೆ. ಈ ಚಿತ್ರವು ಪ್ರೇಕ್ಷಕರಿಂದ ಅಪಾರ ಮೆಚ್ಚುಗೆಯನ್ನು ಪಡೆಯುತ್ತಿದೆ ಮತ್ತು ಅದರ ಪರಿಣಾಮವು ಸಂಗ್ರಹದ ಅಂಕಿಅಂಶಗಳಲ್ಲಿ ಸ್ಪಷ್ಟವಾಗಿ ಗೋಚರಿಸುತ್ತಿದೆ.

ಇತ್ತೀಚೆಗೆ, ಚಿತ್ರದಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುವ ವಾಣಿ ಕಪೂರ್, ರೆಡ್ 2 ಸಂಗ್ರಹಕ್ಕೆ ಸಂಬಂಧಿಸಿದ ಪೊ?ಸ್ಟ್ ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿದ್ದಾರೆ. ಈ ಪೊನಲ್ಲಿ ಅವರು ಈ ಚಿತ್ರವು ಭಾರತದಲ್ಲಿ 124.51 ಕೋಟಿ ರೂಪಾಯಿಗಳ ವ್ಯವಹಾರವನ್ನು ಮಾಡಿದೆ ಎಂದು ಹೇಳಿದ್ದಾರೆ. ಇತ್ತೀಚಿನ ವರದಿಯ ಪ್ರಕಾರ, 13 ನೇ ದಿನ (ಮಂಗಳವಾರ) ವರೆಗೆ, ಈ ಚಿತ್ರವು ಜಾಗತಿಕವಾಗಿ 169 ಕೋಟಿ ರೂ.ಗಳನ್ನು ಗಳಿಸಿದೆ.ಇದು ಅಜಯ್ ದೇವಗನ್ ಅವರ ಚಿತ್ರಕ್ಕೆ ಸಿಕ್ಕ ದೊಡ್ಡ ಮನ್ನಣೆ.ಈ ಅಂಕಿಅಂಶಗಳಲ್ಲಿ ಇನ್ನೂ ಬದಲಾವಣೆಯ ಸಾಧ್ಯತೆಯಿದೆ. ಅದೇನೇ ಇದ್ದರೂ, ಚಿತ್ರವು ಇದೇ ವೇಗದಲ್ಲಿ ಗಳಿಕೆ ಮುಂದುವರಿಸಿದರೆ, ಶೀಘ್ರದಲ್ಲೇ ಕೆಲವು ದೊಡ್ಡ ದಾಖಲೆಗಳನ್ನು ಮುರಿಯಬಹುದು.

ರೆಡ್ 2 ಚಿತ್ರವನ್ನು ಕ್ರೈಮ್ ಗ್ರಿಲ್ಲರ್ ಆಗಿ ಅತ್ಯುತ್ತಮ ಚಿತ್ರವೆಂದು ಪರಿಗಣಿಸಲಾಗುತ್ತಿದೆ. ಬಿಡುಗಡೆಯಾದ ಎರಡನೇ ವಾರದಲ್ಲೂ ಸಹ, ಪ್ರೇಕ್ಷಕರು ಚಿತ್ರ ವೀಕ್ಷಿಸಲು ಹೆಚ್ಚಿನ ಸಂಖ್ಯೆಯಲ್ಲಿ ಚಿತ್ರಮಂದಿರಗಳಿಗೆ ಬರುತ್ತಿದ್ದಾರೆ. ರಜಾದಿನಗಳು ಮುಗಿದ ನಂತರ, ರೆಡ್ 2 ವಾರದ ದಿನಗಳಲ್ಲಿಯೂ ಸಹ ತನ್ನ ಛಾಪು ಮೂಡಿಸಿದೆ. ವರದಿಗಳ ಪ್ರಕಾರ, ಈ ಚಿತ್ರವು ತನ್ನ 13 ನೇ ದಿನದಂದು ಭಾರತದಲ್ಲಿ ಸುಮಾರು 4 ಕೋಟಿ ರೂ.ಗಳನ್ನು ಸಂಗ್ರಹಿಸಿದೆ, ಇದು ರಜಾದಿನವಲ್ಲದ ದಿನಕ್ಕೆ ಅದ್ಭುತ ಸಂಖ್ಯೆಯಾಗಿದೆ.ಕಳೆದ ಸೋಮವಾರಕ್ಕೆ ಹೋಲಿಸಿದರೆ ಎರಡನೇ ಮಂಗಳವಾರದ ಗಳಿಕೆಯಲ್ಲಿ ಯಾವುದೇ ಗಮನಾರ್ಹ ಕುಸಿತ ಕಂಡುಬಂದಿಲ್ಲ. ಛಾವಾ ಕೂಡ ಇದೇ ರೀತಿ ಬಾಕ್ಸ್ ಆಫೀನಲ್ಲಿ ತನ್ನ ಹಿಡಿತವನ್ನು ಉಳಿಸಿಕೊಂಡಿದೆ.

ರೈಡ್ 2 ಚಿತ್ರದ ಈ ಸ್ಥಿರತೆ ಪ್ರೇಕ್ಷಕರ ಉತ್ಸಾಹ ಮತ್ತು ಚಿತ್ರದ ಗುಣಮಟ್ಟವನ್ನು ಪ್ರತಿಬಿಂಬಿಸುತ್ತದೆ. ರೈಡ್ 2 ರಲ್ಲಿ ಅಜಯ್ ದೇವಗನ್ ಮತ್ತೊಮ್ಮೆ ದಾದಾ ಮನೋಹಭಾಯ್ (ರಿತೇಶ್ ದೇಶಮುಖ್) ಅವರ ಅಕ್ರಮ ಆಸ್ತಿಯ ಮೇಲೆ ದಾಳಿ ಮಾಡುವ ಭಾರತೀಯ ಕಂದಾಯ ಸೇವಾ ಅಧಿಕಾರಿ ಅಮಯ್ ಪಟ್ನಾಯಕ್ ಪಾತ್ರವನ್ನು ನಿರ್ವಹಿಸಿದ್ದಾರೆ. ವಾಣಿ ಕಪೂರ್ ಮತ್ತು ಸೌರಭ್ ಶುಕ್ಲಾ ಅವರ ನಟನೆ ಚಿತ್ರವನ್ನು ಇನ್ನಷ್ಟು ರೋಮಾಂಚನಗೊಳಿಸಿದೆ.

# ಮಕ್ಕಳ ಸಂರಕ್ಷಣೆಯ ಜಾಗೃತಿ ಕಾರ್ಯಕ್ರಮ

ಯುವ ಮಾರ್ಗ ಸುದ್ದಿ

**ರಾಯಚೂರ,ಮೇ.16–** ಮಸ್ಕಿ ತಾಲೂಕಿನ ಮೆದಿಕಿನಾಳ ಗ್ರಾಮದ ಪಂಚಾಯತ್ ಕಟ್ಟೆಯಲ್ಲಿ ಮಕ್ಕಳ ಸಹಾಯವಾಣಿ 1098 ಸೇವೆ ಮತ್ತು ಕಾರ್ಯ ಸೇರಿದಂತೆ ನಾನಾ ವಿಳಯಗಳ ಬಗ್ಗೆ ಮೇ 14ರಂದು ಜಾಗೃತಿ ಕಾರ್ಯಕ್ರಮ ನಡೆಯಿತು.

ಬೇಟಿ ಭಚಾವೋ ಬೇಟಿ ಪಡವೋ ಯೋಜನೆ ಸಹಯೋಗದಲ್ಲಿ ನಡೆದ ಈ ಜಾಗೃತಿ ಕಾರ್ಯಕ್ರಮದಲ್ಲಿ

ಮಕ್ಕಳ ಸಂರಕ್ಷಣೆ, ಬಾಲ್ಯ ವಿವಾಹ ನಳೇಧ ಕಾಯಿದೆ, ಬಾಲಕಾರ್ಮಿಕ ನಳೇಧ ಮತ್ತು ನಯಂತ್ರಣ ಕಾಯಿದೆ, ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣಾ ಕಾಯಿದೆಯ ಬಗ್ಗೆ ತಿಳಿಸಲಾಯಿತು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮಕ್ಕಳ ಸಹಾಯವಾಣಿ ರಾಯಚೂರು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರಾಯಚೂರು ಇವರಿಂದ ನಡೆದ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತ್ ಉಪಾಧ್ಯಕ್ಷರು, ಮತ್ತು ಸದಸ್ಯರು, ಶಿಕ್ಷಣ ಇಲಾಖೆಯಿಂದ ವಲಯ ಸಂಪನ್ಮೂಲಗಳು ವ್ಯಕ್ತಿಗಳು, ಸರಕಾರಿ ಪ್ರೌಢಶಾಲೆಯ ಮುಖ್ಯ ಗುರುಗಳು, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತರು, ಗ್ರಾಮದ ಮುಖಂಡರು, ಸಾರ್ವಜನಕರು ಭಾಗವಹಿಸಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111 9972778310

# ಸಚಿವ ಪ್ರಿಯಾಂಕ್ ಖರ್ಗೆಗೆ ಅಶೋಕ್ ತಿರುಗೇಟು

**ಬೆಂಗಳೂರು,ಮೇ 16–** ವಿಧಾನಸೌಧ ದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದು ಘೋಷಣೆ ಕೂಗಿದ ದೇಶದ್ರೋಹಿಗಳು ನಿಮ ಕಾಂಗ್ರೆಸ್ ಕಚೇರಿಯಲ್ಲಿ ಐಟಿ ಸೆಲ್ ನಡೆಸುತ್ತಿದ್ದಾರೆ. ಮೊದಲು ಅವರನ್ನು ಹೆಡೆಮುರಿ ಕಟ್ಟಿ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಅಶೋಕ್ ಅವರು ಸಚಿವ ಪ್ರಿಯಾಂಕ್ ಖರ್ಗೆಗೆ ಬಹಿರಂಗ ಸವಾಲು ಹಾಕಿದ್ದಾರೆ.

ಈ ಕುರಿತು ತಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸುಧೀರ್ಘ ಪೋಸ್ಟ್ ಮಾಡಿರುವ ಆಶೋಕ್ ಅವರು, ರಾಷ್ಟ್ರಿಯ ಭದ್ರತೆ ವಿಚಾರದ ಬಗ್ಗೆ ಚರ್ಚೆ ಮಾಡೋದಕ್ಕೆ ಸಂಸತ್‌ನಲ್ಲಿ ನಿಮ ಪಕ್ಷದ ದೊಡ್ಡ ದೊಡ್ಡ ನಾಯಕರು ಇದ್ದಾರೆ. ತಾವು ಮೊದಲು ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದು ಕೂಗಿದವರನ್ನ ಹುಡುಕಿ, ಅವರ ಹೆಡೆಮುರಿ ಕಟ್ಟಿ ಎಂದು ತಿರುಗೇಟು ನೀಡಿದ್ದಾರೆ.

ಜಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಅಮಾಯಕ ಭಾರತೀಯ ಪ್ರವಾಸಿಗರನ್ನು ಕೊಂದ ಉಗ್ರರು ತರಬೇತಿ ಪಡೆದ ಭಯೋತ್ಪಾದಕ ಕೇಂದ್ರಗಳು, ಅಲ್ಲಿ ನೆಲೆಸಿದ್ದ ಅವರ 100ಕ್ಕೂ ಹೆಚ್ಚು ಜಿಹಾದಿ ಸಂಗಡಿಗರು, ಅವರ ತಲೆಗೆ ಮತಾಂಧತೆ ತುಂಬಿದ ಭಯೋತ್ಪಾದಕ ಸಂಘಟನೆಗಳ ನಾಯಕರು, ಅವರು ನಡೆಸುತ್ತಿದ್ದ ಮದರಸಾಗಳು, ಅಲ್ಲಿದ್ದ ಶಸ್ತ್ರ, ಸಂವಹನ ಉಪಕರಣಗಳು, ಅವರಿಗೆ ಬೆಂಬಲವಾಗಿ ನಿಂತಿದ್ದ ಪಾಕಿಸ್ತಾನದ ಸೇನಾ ವಾಯುನೆಲೆಗಳು, ಎಲ್ಲವನ್ನೂ ನಮ ಸೇನಾಪಡೆಗಳು ನೆಲಸಮ ಮಾಡಿವೆ ಎಂದು ಹೇಳಿದ್ದಾರೆ.

ಪಾಕಿಸ್ತಾನದ ಆಶ್ರಯದಲ್ಲಿದ್ದ ಉಗ್ರರ ಸಾಮ್ರಾಜ್ಯವೇ ಧೂಳೀಪಟ ಆಗಿರುವಾಗ ಇನ್ನು ಅಲ್ಲಿ ತಲೆ ಎತ್ತಿದ ಹುಳು–ಹುಪ್ಪಟೆಗಳು ಉಳಿಯುತ್ತವೆಯೇ? ಪಹಲ್ಗಾಮ್ ದಾಳಿ ನಡೆಸಿದ ಉಗ್ರರು ಒಂದು ವೇಳೆ ಇನ್ನೂ ಬದುಕಿದ್ದರೆ, ಅವರು, ಪ್ರಪಂಚದ ಯಾವ ಭೂಭಾಗದಲ್ಲಿ, ಪಾತಾಳದಲ್ಲಿ ಅಡಗಿದ್ದರೂ ನಮ ಸೇನಾಪಡೆಗಳು, ರಕ್ಷಣಾ ಪಡೆಗಳು ಇಂದಲ್ಲ ನಾಳೆ ಹಿಡಿದೇ ಹಿಡಿಯುತ್ತಾರೆ. ನಮ ಸೇನಾಪಡೆಗಳ ಸಾಮರ್ಥ್ಯದ ಬಗ್ಗೆ ಇನ್ನೂ ಏನಾದರೂ



ಅನುಮಾನ ಇದ್ದರೆ ದಯವಿಟ್ಟು ಒಮೆ ಪಾಕಿಸ್ತಾನದ ವಾಯು ನೆಲೆಗಳಿಗೆ, ಉಗ್ರರ ಅಡಗುತಾಣಗಳಿಗೆ ಭೇಟಿ ಕೊಟ್ಟು ಬನ್ನಿ ಎಂದು ಸವಾಲು ಎಸೆದಿದ್ದಾರೆ.

ರಾಷ್ಟ್ರಿಯ ಭದ್ರತೆ ವಿಚಾರ ನಮ ಸೇನಾಪಡೆಗಳ ಬಿಡಿ. ಆದರೆ ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಘೋಷಣೆ ಕೂಗಿದ ದೇಶದ್ರೋಹಿಗಳು ಎಲ್ಲಿದ್ದಾರೆ ಎಂದು ಮೊದಲು ಉತ್ತರಿಸಿ ಪುಣ್ಯ ಕಟ್ಟಿಕೊಳ್ಳಿ. ಫೋರೆನ್ಸಿಕ್ ವರದಿಯಲ್ಲಿ ಪಾಕಿಸ್ತಾನ ಜಿಂದಾ ಬಾದ್ ಎಂದು ಕೂಗಿದ್ದು ಸಾಬೀತಾದರೂ ಆ ದೇಶದ್ರೋಹಿ ಗಳನ್ನು ಸಮರ್ಥನೆ ಮಾಡಿಕೊಂಡರಲ್ಲ, ಬಹುಶಃ ಅವರು ನಿಮಗೆ ಬಹಳ ಬೇಕಾದವರು ಇರಬೇಕು.

ಅಂದು ಗೆದ್ದ ರಾಜ್ಯಸಭಾ ಸದಸ್ಯರು ನಿಮ ತಂದೆ ಮಲ್ಲಿಕಾರ್ಜುನ ಖರ್ಗೆ ಅವರ ಪರಮಾಪ್ತರು ಕೂಡ. ಆದ್ದರಿಂದ ಆ ದೇಶದ್ರೋಹಿಗಳು ಎಲ್ಲಿದ್ದಾರೆ ಎಂದು ಬಹುಶಃ ತಮಗೆ ಚೆನ್ನಾಗಿ ಗೊತ್ತಿರಲೇಬೇಕು. ಮೊದಲು ಆ ದೇಶದ್ರೋಹಿಗಳನ್ನು ಹಿಡಿಯಲು ಪೊಲೀಸರಿಗೆ ಸಹಾಯ ಮಾಡಿ ಅವರನ್ನು ಜೈಲಿಗೆ ಅಟ್ಟಿ ಎಂದು ವಾಗ್ದಾಳಿ ನಡೆಸಿದ್ದಾರೆ.

# ಜೆಸ್ಕಾಂನಿಂದ ಮೇ 17 ರಂದು ಗ್ರಾಹಕರ ಸಭೆ

**ರಾಯಚೂರು,ಮೇ.16–** ಇಲ್ಲಿನ ಜೆಸ್ಕಾಂ ಇಲಾಖೆಯಿಂದ ಜಿಲ್ಲೆಯ ಜೆಸ್ಕಾಂ ಉಪ–ವಿಭಾಗ–1ರ ಕಚೇರಿಯಲ್ಲಿ ಗ್ರಾಹಕರ ಸಂವಾದ ಸಭೆಯನ್ನು, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಅಧ್ಯಕ್ಷತೆಯಲ್ಲಿ ಮೇ 17 ರಂದು ಸಮಯ ಬೆಳಗ್ಗೆ 11 ರಿಂದ 1ರವರೆಗೆ ಏರ್ಪಡಿಸಲಾಗಿದೆ. ಈ ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಹಕರು ಹಾಜರಾಗಿ ಕುಂದು ಕೊರತೆಗಳನ್ನು ನಿವಾರಿಸಿಕೊಳ್ಳಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ–ವಿಭಾಗ–1 ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಿಂಗಸುಗೂರು: ಐಟಿಐ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಮೇ.16–** ಜಿಲ್ಲೆಯ ಲಿಂಗಸುಗೂರು ಪಟ್ಟಣದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ವಿವಿಧ ವೃತ್ತಿಗಳ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಎಸ್.ಎಸ್.ಎಲ್.ಸಿ. ಉತ್ತೀರ್ಣ ವಿದ್ಯಾರ್ಥಿಗಳಿಗೆ 02 ವರ್ಷದ ಎಲೆಕ್ಟ್ರಿಷಿಯನ್ (ಎನ್.ಸಿ.ವಿ.ಟಿ), ಎಲೆಕ್ಟ್ರಾನಿಕ್ ಮೆಕಾನಿಕ್ (ಎನ್.ಸಿ.ವಿ.ಟಿ) ಸೇರಿದಂತೆ ವಿವಿಧ ವೃತ್ತಿಗಳಿಗೆ ಆಸಕ್ತರು ಇಲಾಖೆಯ ವೆಬ್‌ಸೈಟ್ ವಿಳಾಸ: www.emptrg.kar.nic.in ಅಥವಾ www.detkarnataka.org.in ನಲ್ಲಿ ಮೇ.28ರೊಳಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9972575585, 9902109750, 8971473686, 9900498642, 9148663484ಗೆ ಸಂಪರ್ಕಿಸುವಂತೆ ಲಿಂಗಸುಗೂರು ಪಟ್ಟಣದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಾಕ್ ಅಣ್ವಸ್ತ್ರಗಳ ಮೇಲೆ ಜಾಗತಿಕ ನಿಗಾ ಅಗತ್ಯ:ರಾಜ್‌ನಾಥ್

**ನವದೆಹಲಿ,ಮೇ.16–**ಭಯೋತ್ಪಾದಕರಿಗೆ ಬೆಂಬಲ ನೀಡುತ್ತ ಬಂದಿರುವ ಪಾಕಿಸ್ತಾನದ ಬಳಿ ಇರುವ ಅಣ್ವಸ್ತ್ರಗಳ ಮೇಲೆ ಜಾಗತಿಕ ಪರಮಾಣು ನಿಗಾ ಘಟಕ ಮೇಲ್ವಿಚಾರಣೆ ವಹಿಸಬೇಕು ಎಂದು ರಕ್ಷಣಾ ಸಚಿವ ರಾಜ್‌ನಾಥ್‌ಸಿಂಗ್ ಒತ್ತಾಯಿಸಿದ್ದಾರೆ.

ಭಾರತ ಇಂದಿಗೂ ಯುದ್ಧ ಬೆಂಬಲಿಸುವುದಿಲ್ಲ. ದೇಶದ ಸಾರ್ವಭೌಮತೆಗೆ ಧಕ್ಕೆ ಬಂದರೆ ತಕ್ಕ ಶಾಸ್ತಿ ಮಾಡುತ್ತೇವೆ ಎಂದು ಪಾಕ್ ವಿರುದ್ಧ ಅವರು ಗುಡುಗಿದ್ದಾರೆ.ಪಾಕಿಸ್ತಾನ ಕೇವಲ ಭಯೋತ್ಪಾದನೆ ಮತ್ತು ಪಾಕ್ ಆಕ್ರಮಿತ ಕಾಶ್ಮೀರ ಮೇಲೆ ಕೇಂದ್ರೀಕರಿಸದ ಹೊರತು ಪಾಕಿಸ್ತಾನದೊಂದಿಗೆ ಯಾವುದೇ ಮಾತುಕತೆ ಸಾಧ್ಯವಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.ಶ್ರೀನಗರದ ಬಾದಾಮಿ ಬಾಗ್ ಕಂಟೋನ್ಮೆಂಟ್ ಪ್ರದೇಶದಲ್ಲಿ ಸೈನಿಕರೊಂದಿಗೆ ಸಂವಾದ ನಡೆಸಿದ ಅವರು ಆಪರೇಷನ್ ಸಿಂಧೂರ್ ಅನ್ನು ಭಾರತದ ಇತಿಹಾಸದಲ್ಲಿ ಅತಿದೊಡ್ಡ ಭಯೋತ್ಪಾದನಾ ಕಾರ್ಯಾಚರಣೆ ಎಂದು ಶ್ಲಾಘಿಸಿದರು.

ಗಡಿಯಾಚೆಗಿನ ಭಯೋತ್ಪಾದಕ ಜಾಲಗಳನ್ನು ಕಿತ್ತೊಗೆಯಲು ದೇಶವು ಯಾವುದೇ ಹಂತಕ್ಕೂ ಹೋಗಲು ಸಿದ್ಧವಾಗಿದೆ ಎಂದು ಗುಡುಗಿದ್ದಾರೆ.ಪಹಲ್ಗಾಮ್ ದಾಳಿಯ ಬಳಿಕ ಭಯೋತ್ಪಾದಕರು ಮತ್ತು ಪಾಕಿಸ್ತಾನಕ್ಕೆ ಭಾರತೀಯ ಸೇನಾ ಪಡೆಗಳು ದಿಟ್ಟ ಉತ್ತರ ನೀಡಲಾಗಿದೆ. ಈ ಹಿನ್ನೆಲೆಯಲ್ಲಿ ಸೇನಾ ಯೋಧರ ಕೆಲಸಕ್ಕೆ ತಲೆ ಭಾಗುವುದಾಗಿ ಹೇಳಿದ್ದಾರೆ.

ಭಯೋತ್ಪಾದನೆ ಮತ್ತು ಭಯೋತ್ಪಾದಕರ ವಿರುದ್ಧ ಹೋರಾಡಿದ ವೀರ ಯೋಧರ ಪರಮೋಚ್ಚ ತ್ಯಾಗಕ್ಕೆ ತಲೆಬಾಗಲು ಬಯಸುತ್ತೇನೆ. ಅವರ ಶೌರ್ಯ, ಸಾಹಸ ಶ್ಲಾಘನೀಯ. ಪಹಲ್ಗಾಮ್‌ನಲ್ಲಿ ಹುತಾತ್ಮರಾದ ಅಮಾಯಕ ನಾಗರಿಕರಿಗೂ ಗೌರವ ಸಲ್ಲಿಸುತ್ತೇನೆ. ಗಾಯಗೊಂಡ ಸೈನಿಕಕರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸಿದ್ದಾರೆ.ಸಿಂಧೂರ್ ಆಪರೇಷನ್ ಸಮಯದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರ ಸಮರ್ಥ ನಾಯಕತ್ವ ಮತ್ತು ಮಾರ್ಗದರ್ಶನದಲ್ಲಿ ಸೇನಾ ಪಡೆಗಳು ಶೌರ್ಯ ಸಾಹಸ ಮೆರೆದಿದ್ದಾರೆ.ಈ ಬಗ್ಗೆ ಇಡೀ ದೇಶ ಹೆಮೆ ಪಡುತ್ತಿದೆ ಎಂದಿದ್ದಾರೆ

ಶೆಲ್ ದಾಳಿ ಸ್ಥಳಕ್ಕೆ ಭೇಟಿ: ಬಾದಾಮಿ ಬಾಗ್ ಕಂಟೋನ್ಮೆಂಟ್‌ನಲ್ಲಿ



ಪಾಕಿಸ್ತಾನ ಸೇನೆ ನಡೆಸಿದ ಶೆಲ್ ದಾಳಿಗಳನ್ನು ಸಚಿವ ರಾಜನಾಥ್ ಸಿಂಗ್ ಪರಿಶೀಲಿಸಿದರು.ಭಾರತ ಮೇ 7 ರಂದು ಆಪರೇಷನ್ ಸಿಂದೂರ್ ಅನ್ನು ಪ್ರಾರಂಭಿಸಿದ ನಂತರ ಕೇಂದ್ರಾಡಳಿತ ಪ್ರದೇಶಕ್ಕೆ ಅವರ ಮೊದಲ ಭೇಟಿಯಲ್ಲಿ, ರಕ್ಷಣಾ ಸಚಿವರು ಜಮ್ಮು ಮತ್ತು ಕಾಶ್ಮೀರದ ಒಟ್ಟಾರೆ ಪರಿಸ್ಥಿತಿಯನ್ನು ಪರಿಶೀಲಿಸಲಿದ್ದಾರೆ.ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಅವರು ಚಿನಾರ್ ಕಾರ್ಪ್ಸ್‌ನ ಡಾಗರ್ ವಿಭಾಗದ ಅಡಿಯಲ್ಲಿ ಫಾರ್ವರ್ಡ್ ಪೋಸ್ಟ್‌ಗಳಿಗೆ ಭೇಟಿ ನೀಡಿ ಪರಿಶೀಲಿಸಿ ಸೈನಿಕತ ಧೈರ್ಯ, ಹೆಚ್ಚಿನ ಸ್ಥೈರ್ಯ ಮತ್ತು ಜಾಗರೂಕತೆಯನ್ನು ಶ್ಲಾಘಿಸಿದರು,

ಪ್ರಧಾನಿ ನರೇಂದ್ರ ಮೋದಿ ಪಂಜಾಬ್‌ನ ಆದಂಪುರ ವಾಯುನೆಲೆಗೆ ಭೇಟಿ ನೀಡಿ ಸೈನಿಕರೊಂದಿಗೆ ಸಂವಾದ ನಡೆಸಿದ್ದರು.ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದೊಳಗೆ ಭಾರತ ಒಂಬತ್ತು ಭಯೋತ್ಪಾದಕ ಗುರಿಗಳನ್ನು ಭಾರತ ತೆಗೆದುಕೊಂಡ ಆಪರೇಷನ್ ಸಿಂಧೂರ ಅನ್ನು ನಡೆಸಿದ ಪೈಲಟ್‌ಗಳು ಮತ್ತು ಸಹಾಯಕ ಸಿಬ್ಬಂದಿಯನ್ನು ಭೇಟಿ ಮಾಡಿದರು.ಭಾರತ ಮೇ 7 ರಂದು ಆಪರೇಷನ್ ಸಿಂಧೂರ ಅನ್ನು ಪ್ರಾರಂಭಿಸಿದ ನಂತರ ಕೇಂದ್ರಾಡಳಿತ ಪ್ರದೇಶಕ್ಕೆ ಅವರ ಮೊದಲ ಭೇಟಿಯಲ್ಲಿ, ರಕ್ಷಣಾ ಸಚಿವರು ಜಮ್ಮು ಮತ್ತು ಕಾಶ್ಮೀರದ ಒಟ್ಟಾರೆ ಪರಿಸ್ಥಿತಿಯನ್ನು ಪರಿಶೀಲಿಸಲಿದ್ದಾರೆ.

# ಕರವೇ ವತಿಯಿಂದ ಸ್ಥಾಯಿ ಸಮಿತಿ ಅಧ್ಯಕ್ಷರಿಗೆ ಸನ್ಮಾನ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಮೇ.16–ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಕುಮಾರ ಶೆಟ್ಟಿ ಬಣ)ದ ಸಂಘಟನೆ ತಾಲೂಕ ಘಟಕ ಲಿಂಗಸೂಗೂರು ವತಿಯಿಂದ ಲಿಂಗಸೂಗೂರು ಪುರಸಭೆಯ ನೂತನ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ಆಯ್ಕೆಯಾದ ದೊಡ್ಡನಗೌಡ ಜಿ. ಹೊಸಮನಿಯವರಿಗೆ ಸನ್ಮಾನಿಸಿ ಗೌರವಿಸಲಾಯಿತು.**

**ಈ ಸಂದರ್ಭದಲ್ಲಿ ಕರವೇ ಅಧ್ಯಕ್ಷ ಆಂಜನೇಯ ಹೆಚ್. ಭಂಡಾರಿ, ಪುರಸಭೆ ಸದಸ್ಯರಾದ ಮುತ್ತು ಮೇಟಿ, ಉಪಾಧ್ಯಕ್ಷರಾದ ಭೀಮೇಶ್‌ಎಲ್. ನಾಯಕ, ಅಶೋಕ್ ನಾಯಕ, ಸಲೀಂಖಾನ್, ಶಿವು ಪತ್ತಾರ್, ಸಿದ್ದು ಚಲುವಾದಿ ಸೇರಿದಂತೆ ಇದ್ದರು.**

# ಮೀನುಗಾರಿಕೆ ಇಲಾಖೆಯಿಂದ ಸಹಾಯಧನಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಮೆ.16–** ಇಲ್ಲಿನ ಮೀನುಗಾರಿಕೆ ಇಲಾಖೆಯಿಂದ 2025–26ನೇ ಸಾಲಿನ ಜಿಲ್ಲಾ ಪಂಚಾಯತ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ಮೀನುಗಾರರಿಗೆ ಉಚಿತವಾಗಿ ಮೀನುಗಾರಿಕೆ ವಿವಿಧ ಸಲಕರಣೆ ಖರೀದಿಸಿದವರಿಗೆ ಸಹಾಯಧನ ನೀಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಮೀನುಗಾರಿಕೆ ಸಲಕರಣೆ ಕಿಟ್‌ಗಳ ವಿತರಣೆ ಹಾಗೂ ಮತ್ಸ್ಯವಾಹಿನಿ ಯೋಜನೆಯಡಿ ದ್ವಿಚಕ್ರ ವಾಹನ ಮತ್ತು ಐಸ್ ಬಾಕ್ಸ ಖರೀದಿಸಿದವರಿಗೆ ಸಹಾಯಧನ ಪಡೆಯಲು ವೆಬ್‌ಸೈಟ್ ವಿಳಾಸ: raichur.nic.in ನಲ್ಲಿ ಜೂನ್ 21ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕರು ಅಥವಾ ಆಯಾ ಮೀನುಗಾರಿಕೆ ಸಹಾಯಕ ನಿರ್ದೇಶಕರು ಕಚೇರಿಗಳನ್ನು ಸಂಪರ್ಕಿಸುವಂತೆ ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹರ್ಷಿತಾ ರಾಜ್ಯಕ್ಕೆ ಮೂರನೇ ಸ್ಥಾನ

ಯುವ ಮಾರ್ಗ ಸುದ್ದಿ



**ಲಿಂಗಸಗೂರು,ಮೇ16–** ಸಿಬಿಎಸ್‌ಇ ಹತ್ತನೇ ತರಗತಿ ಪರೀಕ್ಷೆ ಫಲಿತಾಂಶ ಪ್ರಕಟವಾಗಿದ್ದು ಲಿಂಗಸಗೂರು ನಗರದ ಹರ್ಷಿತಾ ತಂದೆ ಶಿವಕುಮಾರ್ ಚಿಲ್ಕರಾಗಿ ಪ್ರತೀಶತ 97 ಅಂಕ ಪಡೆಯುವದರ ಮೂಲಕ ರಾಜ್ಯಕ್ಕೆ ಮೂರನೆಯ ಸ್ಥಾನ ಪಡೆದು ತಂದೆ – ತಾಯಿಗೆ ಹಾಗೂ ತಾನು ಕಲಿತ ಆಳ್ವಾಸ್ ಶಾಲೆಗೆ ಕೀರ್ತಿ ತಂದಿದ್ದಾಳೆ.

ಬಾಲಕಿಯು ಈ ಸಾಧನೆ ಮಾಡಿರುವುದು ಪೋಷಕರಿಗೂ ಮತ್ತು ಲಿಂಗಸಗೂರು ನಗರದ ನಾಗರಿಕರಿಗೆ ಹೆಮ್ಮೆಯ ವಿಷಯವಾಗಿದೆ. ಹರ್ಷಿತಾಳ ಸಾಧನೆ ಉಳಿದ ಮಕ್ಕಳಿಗೆ ಸ್ಫೂರ್ತಿದಾಯಕವಾಗಿದೆ.ಸತತ ಪರಿಶ್ರಮ, ನಿರಂತರವಾಗಿ ಓದಿದರೆ ಏನು ಬೇಕಾದ್ರು ಸಾದಿಸಬವುದು ಎಂದು ಸಾಬೀತು ಪಡಿಸಿದ್ದಾಳೆ.

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ: ಶಾಲಾ ಆದ್ಯತೆ ನಮೂದಿಸಲು ಸೂಚನೆ

**ರಾಯಚೂರು,ಮೇ.16–** ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಡಾ.ಎ.ಪಿ.ಜೆ, ಅಬ್ದುಲ್ ಕಲಾಂ ವಸತಿ ಶಾಲೆಗಳಲ್ಲಿ 6ನೇ ತರಗತಿಗೆ ದಾಖಲಾತಿ ಸಂಬಂಧ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಶಾಲಾ ಆದ್ಯತೆಯನ್ನು ನಮೂದಿಸುವಂತೆ ಕೋರಲಾಗಿದೆ.5ನೇ ತರಗತಿಯಲ್ಲಿ ಉತ್ತೀರ್ಣರಾದ ಅರ್ಹ ವಿದ್ಯಾರ್ಥಿಗಳಿಂದ 6ನೇ ತರಗತಿ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬುದ್ಧಿಸ್ಟ್, ಸಿಖ್ ಮತ್ತು ಪಾರ್ಸಿ ಅರ್ಹ ವಿದ್ಯಾರ್ಥಿಗಳು ಮತ್ತು ಪ್ರ.ಜಾತಿ/ ಪ.ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಅದರಂತೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಏಪ್ರಿಲ್ 27ರಂದು ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಬರೆದಿರುತ್ತಾರೆ.ಪ್ರಸ್ತುತ ಪರೀಕ್ಷೆ ಬರೆದಿರುವ ವಿದ್ಯಾರ್ಥಿಗಳು ಮಾತ್ರ ತಾವು ಪ್ರವೇಶ ಪಡೆಯಲು ಇಚ್ಛಿಸುವ ಜಿಲ್ಲೆಯಲ್ಲಿರುವ ಶಾಲೆಗಳ ಆದ್ಯತೆಯನ್ನು ನಮೂದಿಸಲು ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧಿಕೃತ ಜಾಲತಾಣ Website:https://dom.karnataka.gov.in ನಲ್ಲಿ ಮೇ.17ರವರೆಗೆ ಅವಕಾಶ ಕಲ್ಪಿಸಲಾಗಿದ್ದು, ಪರೀಕ್ಷೆ ಬರೆದಿರುವ ಎಲ್ಲಾ ವಿದ್ಯಾರ್ಥಿಗಳು ಪ್ರವೇಶ ಪಡೆಯಲು ಇಚ್ಛಿಸುವ ಜಿಲ್ಲೆಯಲ್ಲಿರುವ ಶಾಲೆಗಳ ಆದ್ಯತೆಯನ್ನು ಕಡ್ಡಾಯವಾಗಿ ನಮೂದಿಸಬೇಕು.ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಸಹಾಯವಾಣಿ: 8277799990, ರಾಯಚೂರು ಮೊ.ನಂ: 9731341815, 9686853719, 6361866571, 9108175899, 9902906266, ಮಾನವಿ, ಸಿರವಾರ ಮೊ.ನಂ: 7411771075, 886733478, ದೇವದುರ್ಗ ಮೊ.ನಂ: 9731794252, 9148233616, ಲಿಂಗಸೂಗೂರು, ಮಸ್ಕಿ ಮತ್ತು ಸಿಂಧನೂರು ಮೊ.ನಂ: 9740871306, 8660879712ಗೆ ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಜೆಪಿಯಿಂದ ತಿರಂಗಾ ಯಾತ್ರೆ

**ಬೆಂಗಳೂರು, ಮೇ 16–** ಭಾರತೀಯ ಸೇನೆಯ ಆಪರೇಷನ್ ಸಿಂಧೂರವನ್ನು ಬೆಂಬಲಿಸಿ ರಾಜ್ಯ ಬಿಜೆಪಿ ಬೆಂಗಳೂರಿನಲ್ಲಿಂದು ತಿರಂಗಾ ಯಾತ್ರೆಯನ್ನು ನಡೆಸಿತು.

ಬೆಂಗಳೂರಿನ ಮಲ್ಲೇಶ್ವರದ ಶಿರೂರ್ ಪಾರ್ಕ್‌ನಿಂದ ಮಲ್ಲೇಶ್ವರದ 18ನೇ ಅಡ್ಡ ರಸ್ತೆವರೆಗೆ ನಡೆದ ಈ ತಿರಂಗಾ ಯಾತ್ರೆಯಲ್ಲಿ ಪ್ರತಿಪಕ್ಷ ನಾಯಕ ಆರ್. ಅಶೋಕ್, ರಾಜ್ಯ ಬಿಜೆಪಿ ಉಸ್ತುವಾರಿ ರಾಧ ಮೋಹನ್ ದಾಸ್ ಅಗರ್‌ವಾಲ್, ಸಹ ಉಸ್ತುವಾರಿ ಸುಧಾಕರ್‌ರೆಡ್ಡಿ, ವಿಧಾನಪರಿಷತ್‌ನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವ ಸಿ.ಟಿ. ರವಿ, ಶಾಸಕರುಗಳಾದ ಎಸ್. ಆರ್. ವಿಶ್ವನಾಥ್, ಗೋಪಾಲಯ್ಯ, ರವಿ ಸುಬ್ರಹ್ಮಣ್ಯ, ಉದಯ್ ಗರುಡಾಚಾರ್, ಸಿ.ಕೆ. ರಾಮಮೂರ್ತಿ, ಡಾ. ಸಿ.ಎನ್. ಅಶ್ವತ್ಥ್‌ನಾರಾಯಣ, ಆರ್. ರಘು, ಸತೀಶ್‌ರೆಡ್ಡಿ, ಬೈರತಿ ಬಸವರಾಜು ಸೇರಿದಂತೆ ಹಲವು ಶಾಸಕರು, ಮುಖಂಡರುಗಳು ರಾಷ್ಟ್ರ ಧ್ವಜ ಹಿಡಿದು ಈ ತಿರಂಗಾ ಯಾತ್ರೆಯಲ್ಲಿ ಹೆಜ್ಜೆ ಹಾಕಿದರು.

ರಾಷ್ಟ್ರ ಭದ್ರತೆಗಾಗಿ ನಾಗರಿಕರು ಎಂಬ ಹೆಸರಿನಲ್ಲಿ ನಡೆದ ಈ ತಿರಂಗಾ ಯಾತ್ರೆ ಪಕ್ಷಾತೀತವಾಗಿ ನಡೆದಿದ್ದು, ರಾಷ್ಟ್ರ ಧ್ವಜ ಹಿಡಿದು ತಿರಂಗಾ ಯಾತ್ರೆಯಲ್ಲಿ ಹಲವು ನಾಗರಿಕರು, ರಾಷ್ಟ್ರಾಭಿಮಾನಿಗಳು, ವಿವಿಧ ಸಂಘಟನೆಗಳ ಮುಖಂಡರು ಪಾಲ್ಗೊಂಡಿದ್ದರು.ತಿರಂಗಾ



ಯಾತ್ರೆಯ ಉದ್ದಕ್ಕೂ ಭಾರತೀಯ ಸೇನಾ ಪಡೆಗಳ ಪರವಾಗಿ ಜೈಕಾರದ ಘೋಷಣೆಗಳನ್ನು ಕೂಗಲಾಯಿತು.

ವಂದೇ ಮಾತರಂ, ಭಾರತ್ ಮಾತಾಕಿ ಜೈ ಎಂಬ ಘೋಷಣೆಗಳನ್ನು ತಿರಂಗಾ ಯಾತ್ರೆಯಲ್ಲಿ ಪಾಲ್ಗೊಂಡಿದ್ದವರು ಕೂಗಿ ರಾಷ್ಟ್ರಾಭಿಮಾನ ಮೆರೆದರು.ಇಂದು ಬೆಂಗಳೂರಿನಲ್ಲಿ ತಿರಂಗಾ ಯಾತ್ರೆ ನಡೆಸಿರುವ ರಾಜ್ಯ ಬಿಜೆಪಿ ನಾಳೆ ಮತ್ತು ನಾಡಿದ್ದು ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಹಾಗೂ ಮೇ 18 ರಿಂದ 23 ರವರೆಗೆ ಎಲ್ಲ ತಾಲ್ಲೂಕು ಕೇಂದ್ರಗಳಲ್ಲಿಈ ತಿರಂಗಾ ಯಾತ್ರೆಯನ್ನು ನಡೆಸಲಿದೆ.

# ಮೇ 16, 17ರಂದು ಉರುಸ್ ಆಚರಣೆ

ಯುವ ಮಾರ್ಗ ಸುದ್ದಿ

**ರಾಯಚೂರು,ಮೇ.16–** ತಾಲೂಕಿನ ಇಡಪನೂರು ಗ್ರಾಮದ ಹಜರತ್ ಗೋಕರ್ ಗರೀಬ್ ಬಂದಾನವಾಜ್ (ಸುನ್ನಿ) ದರ್ಗಾದ ಉರುಸ್ ಪ್ರತಿ ವರ್ಷದಂತೆ ಈ ವರ್ಷವು ಕೂಡ ಮೇ.16ರಿಂದ 17ರವೆರೆಗೆ ಎರಡು ದಿನಗಳ ಕಾಲ ಅದ್ದೂರಿಯಾಗಿ ನಡೆಯಲಿದೆ ಎಂದು ಜಿಲ್ಲಾ ವಕ್ಫ್ ಮಂಡಳಿಯ ವಕ್ಫ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**